ವಿಜಯಪುರ | ಸಂಪುಟ 04 | ಸಂಚಿಕೆ 132 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಜುಲೈ, 15, 2026

"ವಿಜಯಪುರ ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಪ್ರಗತಿಯಲ್ಲಿದೆ. ಮತಗಟ್ಟೆ ಮಟ್ಟದ ಅಧಿಕಾರಿಗಳು ಜೂನ್ 30 ರಿಂದ ಮತದಾರರಿಗೆ ಗಣತಿ ನಮೂನೆ ವಿತರಿಸುವ ಕಾರ್ಯ ಭರದಿಂದ ನಡೆಯುತ್ತಿದೆ."



■ ಡಾ.ಆನಂದ್ ಕೆ
ಜಿಲ್ಲಾಧಿಕಾರಿ, ವಿಜಯಪುರ

# ಏತ ನೀರಾವರಿ ಯೋಜನೆಗಳಿಗೆ ನೀರು ಬಿಡಲು ವಿಳಂಬ : ಬೆಳ್ಳುಬ್ಬಿ

## ರಾಜ್ಯ ಸರ್ಕಾರದ ಕ್ರಮವನ್ನು ಖಂಡಿಸಿ, ರೈತರೊಂದಿಗೆ ಚರ್ಚಿಸಲು ಜುಲೈ 15 ರಂದು ಮಟ್ಟಿಹಾಳ ಕ್ರಾಸ್‌ನಲ್ಲಿ ಸಭೆ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ಪ್ರಸಕ್ತ ಸಾಲಿನ ಮುಂಗಾರು ಮಳೆ ಸಮರ್ಪಕವಾಗಿ ಆಗದ ಹಿನ್ನೆಲೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮಳೆಯ ಕೊರತೆಯಿಂದ ಬಿತ್ತನೆ ಕಾರ್ಯಗಳು ಸ್ಥಗಿ-ತಗೊಂಡಿದ್ದು, ಅವಳಿ ಜಿಲ್ಲೆಗಳ ಏತ ನೀರಾವರಿ ಯೋಜನೆಗಳಿಗೆ ನೀರು ಬಿಡಲು ವಿಳಂಬ ಮಾಡುತ್ತಿರುವ ಸರ್ಕಾರದ ಕ್ರಮವನ್ನು ಖಂಡಿಸಿ, ರೈತರೊಂದಿಗೆ ಚರ್ಚಿಸಲು ಬುಧವಾರ ಜುಲೈ 15 ರಂದು ಬೆಳಗ್ಗೆ 10.30ಕ್ಕೆ ತಾಲೂಕಿನ ಮಟ್ಟಿಹಾಳ ಕ್ರಾಸ್‌ನಲ್ಲಿ ಸಭೆ ಕರೆಯಲಾಗಿದೆ. ಈ ಸಭೆಗೆ ಜಿಲ್ಲೆಯ ಎಲ್ಲಾ ರೈತ ಬಂಧುಗಳು ಆಗಮಿಸಬೇಕು ಎಂದು ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಮನವಿ ಮಾಡಿದ್ದಾರೆ.

ಮಂಗಳವಾರ ಪಟ್ಟಣದ ಸ್ವಗೃಹದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ಅವಳಿ ಜಿಲ್ಲೆಯಲ್ಲಿರುವ ಏತ ನೀರಾವರಿ ಯೋಜನೆಗಳನ್ನು ಪ್ರಾರಂಭಿಸಿ, ಅವುಗಳನ್ನು ಶಾಶ್ವತವಾಗಿ ನೀರಾವರಿ ಸಲಹಾ ಸಮಿತಿಯಿಂದ ಹೊರತೆಗೆದು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರಸಕ್ತ ಮುಂಗಾರು ಮಳೆ ಸರಿಯಾಗಿ ಆಗದಿರುವುದು ಮತ್ತು ಕೃಷ್ಣಾ ನದಿಗೆ ತಡವಾಗಿ ನೀರು ಬಂದಿರುವುದು ರೈತರಲ್ಲಿ ಆತಂಕ ಮೂಡಿಸಿದೆ. ಬೆಳೆದ ಬೆಳೆಗಳಿಗೆ ನೀರು ಇಲ್ಲದೆ ಒಣಗುವ ಭೀತಿ ಎದುರಾಗಿದ್ದು, ಕುಡಿಯುವ ನೀರಿಗೂ ತೊಂದರೆ ಉಂಟಾಗುತ್ತಿದೆ ಎಂದರು.

ಈ ಕುರಿತು ಈಗಾಗಲೇ ನೀರಾವರಿ ಸಚಿವರು ಹಾಗೂ ಕೆಬಿಜೆಎನ್ನೆಲ್ ಅಧಿಕಾರಿಗಳಿಗೆ ಪತ್ರ ಬರೆದಿದ್ದೇವೆ. ಆದರೆ ಇನ್ನೂ ಸ್ಪಂದನೆ ದೊರೆತಿಲ್ಲ ಎಂದು ಅವರು ಆರೋಪಿಸಿದರು.

ಅವಳಿ ಜಿಲ್ಲೆಗಳ ಸಾರ್ವಜನಿಕರು ನೀರಾವರಿ ಯೋಜನೆಗಳಿಗೆ ಭೂಮಿ ಕಳೆದುಕೊಂಡ ರೈತರಿಗೆ ಅನ್ಯಾಯವಾಗುತ್ತಿದ್ದು, ಶಾಶ್ವತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಜುಲೈ 14 ರೊಳಗೆ ನೀರು ಬಿಡದಿದ್ದರೆ ಉಗ್ರ ಹೋರಾಟ ಕೈಗೊಳ್ಳಲಾಗುವುದು. ರೈತರೊಂದಿಗೆ ಸೇರಿ ನಾವೇ ಕಾಲುವೆಗಳಿಗೆ ನೀರು ಹ-ರಿಸುತ್ತೇವೆ ಎಂದು ಮುನ್ನೆಚ್ಚರಿಕೆ ನೀಡಿದ್ದೇವೆ. ಆದರೆ ಸರ್ಕಾರ ಇನ್ನೂ ಸ್ಪಂದಿಸಿಲ್ಲ ಎಂದು ಹೇಳಿದರು.

ಇದರಿಂದಾಗಿ ಈ ಮಹತ್ವದ ವಿಷಯದ ಕುರಿತು ಚರ್ಚಿಸಲು ಸಭೆ ಕರೆಯಲಾಗಿದ್ದು, ನೀರು ಬಿಡುವ ನಿರ್ಧಾರ ಕೈಗೊಂಡರೆ ರೈತರೊಂದಿಗೆ ಸೇರಿ ಅದನ್ನು ಸ್ವಾಗತಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಬಸಪ್ಪಗೌಡ ಮನಗೂಳಿ, ಚಂದ್ರು ನಟ್ಟೆಕಟ್ಟಿ, ಪರಮಾನಂದ ಬರಗಿ ಸೇ-ರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

### ಪ್ರಮುಖ ಬೇಡಿಕೆಗಳು

* ಮುಳವಾಡ, ಚಿಮ್ಮಲಗಿ, ಗುತ್ತಿ ಬಸವಣ್ಣ ಏತ ನೀರಾವರಿ ಯೋಜನೆಗಳಿಗೆ ತಕ್ಷಣ ನೀರು ಬಿಡಬೇಕು.
* ಆಲಮಟ್ಟಿ ಡ್ಯಾಂ ಎಡ ಮತ್ತು ಬಲ ಭಾಗದ ಕಾಲುವೆಗಳ ಮೂಲಕ ನೀರು ಹರಿಸಬೇಕು.
* ಈ ಯೋಜನೆಗಳನ್ನು ನೀರು ನಿರ್ವಹಣಾ ಸಲಹಾ ಸಮಿತಿ ವ್ಯಾಪ್ತಿಯಿಂದ ಹೊರಗಿಡಬೇಕು.
* ರೈತರಿಗೆ ನ್ಯಾಯಯುತ ಪರಿಹಾರ ನೀಡಬೇಕು.

# ವಿಜಯಪುರ ಜಿಲ್ಲೆಯಲ್ಲಿ 19,07,583 ಗಣತಿ ನಮೂನೆ ವಿತರಣೆ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಪ್ರಗತಿಯಲ್ಲಿದೆ. ಮತಗಟ್ಟೆ ಮಟ್ಟದ ಅಧಿಕಾ-ರಿಗಳು ಜೂನ್ 30 ರಿಂದ ಮನೆ ಮನೆಗೆ ಭೇಟಿ ನೀಡಿ ಮತದಾರ-ರಿಗೆ ಗಣತಿ ನಮೂನೆಯ ವಿತರಿಸುವ ಕಾರ್ಯ ಭರದಿಂದ ನಡೆಯುತ್ತಿದ್ದು, ಜುಲೈ 13 ರವರೆಗೆ ಜಿಲ್ಲೆಯ ಪ್ರಗತಿ ವರದಿಯ ಅನುಸಾರ 19,07,583 ಗಣತಿ ನಮೂನೆ ವಿತರಿಸಲಾಗಿದೆ. ಅವುಗಳಲ್ಲಿ 7,27,933 ಗಣಕೀಕರಣಗೊಂಡ ಗಣತಿ ನಮೂನೆಗಳಿವೆ ಎಂದು ಜಿಲ್ಲಾ ಚುನಾವಣಾ ಅಧಿಕಾರಿಗಳಾದ ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಅವರು ತಿಳಿಸಿದ್ದಾರೆ. ಮತದಾರರ ಪಟ್ಟಿಯಂತೆ ಜಿಲ್ಲೆಯಲ್ಲಿ ಒಟ್ಟು 19,82,114 ಮತದಾರರು ಇದ್ದು, ಇವರಿಗೆ ಮನೆ-ಮನೆಗೆ ತೆರಳಿ ಗಣತಿ ನಮೂನೆಗಳನ್ನು ವಿತರಿಸಿ ಅಗತ್ಯ ಮಾಹಿತಿಯನ್ನು ಸಂಗ್ರಹಿಸುವ ಕಾರ್ಯ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

ಗಣತಿ ನಮೂನೆಗಳ ವಿತರಣೆ ಹಾಗೂ ಡಿಜಟಲೀಕರಣ ಕಾರ್ಯ ಜೂನ್ 30 ರಿಂದ ಜುಲೈ 29 ವರೆಗೆ ನಡೆಯಲ್ಲಿದ್ದು, ಈ ಅವಧಿಯಲ್ಲಿಮತದಾರರುತಮ್ಮವಿವರಗಳನ್ನು ಪರಿಶೀಲಿಸಿ ಅಗತ್ಯ ದಾಖಲೆಗಳೊಂದಿಗೆ ನಮೂನೆಗಳನ್ನು ಸಲ್ಲಿಸಬಹುದಾಗಿದೆ. 1,707 ಮತದಾರರು ಆನ್ ಲೈನ್ ಮೂಲಕ ಗಣತಿ ನಮೂನೆಗಳನ್ನು ಸಲ್ಲಿಸಿದ್ದಾರೆ. 4,317 ಮತದಾರರು ಶಾಶ್ವತವಾಗಿ ಸ್ಥಳಾಂತರ ಗೊಂಡಿದ್ದಾರೆ. 5,677 ಮತದಾರರು ಮೃತರಾಗಿದ್ದಾರೆ. 1,654 ಮತದಾರರು ಈಗಾಗಲೇ ನೋಂದಾಯಿಸಿಕೊಂಡಿರುವುದು ಪರಿಶೀಲನೆಯಲ್ಲಿ ಕಂಡುಬಂದಿದೆ. ಸಂಗ್ರಹಿಸಲಾಗದ ಅಥವಾ ಗೈರು ಹಾಜರಾಗಿರುವ ಮತದಾರರು 93 ಹಾಗೂ 106 ಇತರೆ ಮತದಾರರು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಮೋಹನ್ ಬಾಗವತ್ ರನ್ನು ಬರಮಾಡಿಕೊಂಡ ಉಮೇಶ ಕಾರಜೋಳ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರಕ್ಕೆ ಆಗಮಿಸಿದ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸರಸಂಘಚಾಲಕ ಮೋಹನ್ ಬಾಗವತ್ ಅವರನ್ನು ಸಮಾಜ ಸೇವಕ, ಯುವ ಸಬಲೀಕರಣ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ಉಮೇಶ ಕಾರಜೋಳ ಅವರು, ಕೇಸರಿ ಶಲ್ಯ ತೊಡಿಸಿ ಹಾಗೂ ಪದ್ಮಶ್ರೀ ಕಾಕಾ ಕಾರಖಾನೀಸ ಅವರ ಪುಸ್ತಕವನ್ನು ನೀಡುವ ಮೂಲಕ ಆತ್ಮೀಯವಾಗಿ ಬರ ಮಾಡಿಕೊಂಡರು.

ವಿಜಯಪುರದ ಸಾಯಿ ಮಂಗಲ ಕಾರ್ಯಾಲಯದಲ್ಲಿ ನಡೆಯಲಿರುವ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸಭೆಯಲ್ಲಿ ಭಾಗವಹಿಸಲು ಆಗಮಿಸಿದ ಮೋಹನ್ ಭಾಗವತ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಿ ಹಾಗೂ ಅಭಿನಂದಿಸಿದ ಕಾರಜೋಳರು, ತಾವು ವಿಜಯಪುರಕ್ಕೆ ಆಗಮಿಸಿರುವುದು ಅತ್ಯಂತ ಸಂತೋಷ ತಂದಿದೆ, ಸಂಘ ಪರಿವಾರ ಒಡನಾಡಿಗಳಿಗೆ ನಿಮ್ಮ ಆಗಮನ ಒಂದು ಹೊಸ ಚೈತನ್ಯ ನೀಡಲಿದೆ, ನಿಮ್ಮ ಅನುಭವ, ಮಾರ್ಗದರ್ಶನದಿಂದ ನಮಗೆ ಹಾಗೂ ಎಲ್ಲ ಸ್ವಯಂ ಸೇವಕರಿಗೆ ಹೊಸ ಶಕ್ತಿ ತುಂಬಿದಂತಾಗಿದೆ ಎಂದು ಆತ್ಮೀಯವಾಗಿ ಸನ್ಮಾನಿಸಿದರು.

ಪದ್ಮಶ್ರೀ ಕಾಕಾ ಕಾರಖಾನೀಸ ಅವರ ಜೀವನಚರಿತ್ರೆಯ ಪುಸ್ತಕವನ್ನು ಅರ್ಪಿಸಿದ ಅವರು, ಪದ್ಮಶ್ರೀ ಕಾಕಾ ಕಾರಖಾನೀಸರು ಅಸ್ಪೃಶ್ಯತೆ ನಿವಾರಣೆ, ಸಮಾನತೆ ಹಾಗೂ ಶಿಕ್ಷಣ ಪ್ರಸಾರಕ್ಕಾಗಿ ತಮ್ಮ ಇಡೀ ಜೀವನವನ್ನೇ ಮುಡುಪಾಗಿರಿಸಿದ್ದರು, ಅವರ ಜೀವನ ಎಲ್ಲರಿಗೂ ಮಾರ್ಗದರ್ಶಿ, ಈ ಮಹಾನ್ ವ್ಯಕ್ತಿಯ ಪುಸ್ತಕವನ್ನು ತಮಗೆ ನೀಡುತ್ತಿರುವೆ ಎಂದು ಕಾರಜೋಳ ಹೇಳಿದರು.

# ಸಂಪೂರ್ಣ ನಿಷ್ಕ್ರೀಯವಾಗಿರುವ ಕಾಂಗ್ರೆಸ್ ಸರ್ಕಾರ

## ಇಂಡಿಯಲ್ಲಿ ಜೆಡಿಎಸ್ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆರೋಪ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ರಾಜ್ಯದಲ್ಲಿ ಭೀಕರ ಬರಗಾಲ ಎದುರಾಗಿದ್ದು ರಾಜ್ಯ ಸರಕಾರ ರೈತರ ನೆರವಿಗೆ ಧಾವಿಸದೆ ರೈತ ಸಮುದಾಯವನ್ನು ಕಡೆಗಣನೆ ಮಾಡುತ್ತಿದೆ. ಸಂಬಂಧಪಟ್ಟ ಇಲಾಖೆಗಳಿಗೆ ಸಚಿವ ಸ್ಥಾನವನ್ನೂ ನೀಡಿಲ್ಲ ಮುಖ್ಯವಾಗಿ ರೈತರಿಗೆ ಅವಶ್ಯವಿರುವ ಕೃಷಿ ಹಾಗೂ ತೋಟಗಾರಿಕೆ ಸಚಿವ ಸ್ಥಾನವೂ ಖಾಲಿ ಇದೆ. ಈ ಸರಕಾರ ಸಂಪೂರ್ಣ ನಿಷ್ಕ್ರೀಯವಾಗಿದೆ ಎಂದು ಜೆಡಿಎಸ್ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು.

ನಗರದ ಪ್ರವಾಸಿಮಂದಿರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷ್ಣಾ ಕಾಲುವೆಗೆ ಈಗಾಗಲೇ ಒಂದುವರೆ ಟಿಎಂಸಿ ನೀರು ಹರಿಸುವದಾಗಿ ಕಲಬುರಗಿ ಆಯುಕ್ತರು ತಿಳಿಸಿದ್ದರು ಬೇಗನೇ ನೀರು ಬಿಡಬೇಕು ಇಲ್ಲದಿದ್ದರೆ ಒತ್ತಡ ಹೇರುವದಾಗಿ ತಿಳಿಸಿದರು.

### ಪ್ರತಿ ತಾಲೂಕಿಗೆ ಕನಿಷ್ಠ ಐದು ಕೋಟಿ ರೂ ವಿಶೇಷ ಅನುದಾನ ಬಿಡುಗಡೆ ಮಾಡಿ

ಶಾಸಕ ಮತ್ತು ಶಾಸಕಾಂಗ ಪಕ್ಷದ ನಾಯಕ ಸುರೇಶ ಬಾಬು ಮಾತನಾಡಿ, ಜಿಲ್ಲೆಯ ಬಹುತೇಕ ಪ್ರದೇಶಗಳಲ್ಲಿ ತೀವ್ರ ಬರಗಾಲದ ಪರಿಸ್ಥಿತಿಯಿದ್ದು ಅನ್ನದಾತನ ಬವಣೆ ದುಸ್ತರವಾಗಿದೆ. ವಾಡಿಕೆಗಿಂತ ಸುಮಾರು 40 % ಕ್ಕಿಂತಲೂ ಕಡಿಮೆ ಮಳೆಯಾಗಿದೆ. ಏಕದಳ, ದ್ವಿದಳ, ಹಾಗೂ ಇತರೆ ಬೆಳೆಗಳಿಗೆ ತೀವ್ರ ಹಾನಿಯಾಗಿದ್ದು ರೈತರು ಸಂಕಷ್ಟದಲ್ಲಿದ್ದಾರೆ ಎಂದರು. ಅಂತರ್ಜಲ ಸಂಪೂರ್ಣ ಬತ್ತಿದೆ. ಟ್ಯಾಂಕರ್ ಮೂಲಕ ನೀರು ಮತ್ತು ತುರ್ತು ಬೋರವೆಲ್ಲ ಗಳಿಗಾಗಿ ಪ್ರತಿ ತಾಲೂಕಿಗೆ ಕನಿಷ್ಠ ಐದು ಕೋಟಿ ರೂ ವಿಶೇಷ ಅನುದಾನ ಬಿಡುಗಡೆ ಮಾಡಬೇಕು ಎಂದರು.

ಸಂಪುಟ ರಚನೆ ಮಾಡದೆ ಇರುವುದರಿಂದ ಇಂಡಿ ತಾಲೂಕಿನ ಭೀಮಾ ನದಿ ದಂಡೆಯ ಗ್ರಾಮಗಳಿಗೆ ಕುಡಿಯುವ ನೀರಿನ ತೊಂದರೆ ಇದ್ದು ಅದಕ್ಕಾಗಿ ಕೇಂದ್ರ ಸಚಿವ ಕುಮಾರಸ್ವಾಮಿಯವರು ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರ ಜೊತೆ ಚರ್ಚೆ ಮಾಡಲಿದ್ದಾರೆ.

ಕೆಎಸ್ ಎನ್‌ಡಿಎಂಸಿ ವರದಿ ಪ್ರಕಾರ ರಾಜ್ಯದ 135 ತಾಲೂಕುಗಳು ಡೆಫಿಸಿಯಂಟ್ ವಲಯದಲ್ಲಿವೆ. ವಿಜಯಪುರ ಸೇರಿ ಎಲ್ಲಾ ಭಾದಿತ ತಾಲೂಕುಗಳಿಗೆ ಅಧಿಕೃತ ಬರ ಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ಆಗ್ರಹಿಸಿದರು.

ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕುಗಳ ಎಲ್ಲಾ ಕೃಷಿ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು. ರೈತರ ಮೇಲೆ ಯಾವದೇ ಸಾಲದ ವಸೂಲಾತಿ ಒತ್ತಡ ಹೇರಬಾರದು ಎಂದರು.

### ರೈತರಿಂದ ಮನವಿ ಸ್ವೀಕರಿಸಿದ ನಿಖಿಲ್

ಪತ್ರಿಕಾಗೋಷ್ಠಿಗೂ ಮೊದಲು ಇಂಡಿ ವಿಧಾನಸಭಾ ಕ್ಷೇತ್ರದ ಅಗಸನಾಳ, ಹೊರ್ತಿ, ಝಳಕಿ ಹಾಗೂ ಅಂಜುಟಗಿ ಗ್ರಾಮಗಳಿಗೆ ಭೇಟಿ ನೀಡಿ ಸಮೀಕ್ಷೆ ನಡೆಸಿ ರೈತರ ಅಳಲನ್ನು ನಿಖಿಲ್ ಕುಮಾರಸ್ವಾಮಿ ಅವರು ಆಲಿಸಿ ಮನವಿಗಳನ್ನು ಸ್ವೀಕರಿಸಿದರು.

ಕೋರ್ ಸಮಿತಿ ಅಧ್ಯಕ್ಷ ಜೆ.ಕೆ ಕೃಷ್ಣಾರೆಡ್ಡಿ ಮಾತನಾಡಿದರು. ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ, ಬಸವನ ಬಾಗೇವಾಡಿಯ ಅಪ್ಪುಗೌಡ ಪಾಟೀಲ, ಇಂಡಿ ಜೆಡಿಎಸ್ ಅಧ್ಯಕ್ಷ ಬಿ.ಡಿ.ಪಾಟೀಲ ಹಂಜಗಿ, ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಯಂಡಿಗೇರಿ, ಮಾಜಿ ಶಾಸಕ ದೇವಾನಂದ ಚವ್ಹಾಣ, ಅಯೂಬ ನಾಟಿಕಾರ, ಶ್ರೀಶೈಲಗೌಡ ಪಾಟೀಲ, ಸಿದ್ದು ಡಂಗಾ, ಡಾ॥ ರಮೇಶ ರಾಠೋಡ ಮತ್ತಿತರಿದ್ದರು.

# ಯೋಜಿತ ಕುಟುಂಬ ಯೋಜನೆಯಿಂದ ಸುಂದರ ಭವಿಷ್ಯ

## ವಿಜಯಪುರ ಡಿಎಚ್ ಒ ಡಾ. ಸಂಪತ್ತಕುಮಾರ ಗುಣಾರಿ ಅಭಿಮತ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ತಾಯಿ ಮರಣ ಪ್ರಮಾಣ ಮತ್ತು ತೊಂದರೆ ತಡೆಗಟ್ಟುವುದು ವಿಶ್ವ ಜನಸಂಖ್ಯೆ ದಿನಾಚರಣೆಯ ಉದ್ದೇಶವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಸಂಪತ್ತ ಗುಣಾರಿ, ಹೇಳಿದರು.

ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿರುವ ನರ್ಸಿಂಗ್ ಕಾಲೇಜಿನ ಆವರಣದಲ್ಲಿ ವಿಶ್ವ ಜನಸಂಖ್ಯಾ ದಿನಾಚರಣೆ ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು.

ಆರೋಗ್ಯಕರ ಸಮಯದಲ್ಲಿ ಗರ್ಭಧಾರಣೆ ಹಾಗೂ ಮಕ್ಕಳ ನಡುವೆ ಆರೋಗ್ಯಕರ ಅಂತರ ಕಾಪಾಡುವವರಿಂದ ತಾಯಿ ಮತ್ತು ಮಕ್ಕಳ ಆರೋಗ್ಯ ವೃದ್ಧಿಸುವದರೊಂದಿಗೆ ಅನಗತ್ಯ ಗರ್ಭಧಾರಣೆಯನ್ನು ತಡೆಗಟ್ಟಬಹುದಾಗಿದೆ ಎಂದ ಅವರು, ಮಹಿಳೆಯರ ಸಂತಾನೋತ್ಪತ್ತಿ ಆರೋಗ್ಯದ ಗುಣಮಟ್ಟ ಸುಧಾರಣೆ ಗರ್ಭಧಾರಣೆಗೆ ಆರೋಗ್ಯಕರ ಸಮಯ ಮತ್ತು ಗರ್ಭಧಾರಣೆಗಳ ನಡುವಿನ ಅಂತರವನ್ನು ಉತ್ತೇಜಿಸಬೇಕಿದೆ ಎಂದರು.

ಭಾರತ ಸ್ವಾತಂತ್ರ್ಯ ಪಡೆದುಕೊಂಡಾಗ ದೇಶದ ಜನಸಂಖ್ಯೆ ಕೇವಲ 33 ಕೋಟಿ ಇತ್ತು. ಕಳೆದ 79 ವರ್ಷಗಳಲ್ಲಿ ಜನಸಂಖ್ಯೆಯ ವಿಷಯದಲ್ಲಿ ಹಲವು ಮಹತ್ವದ ಬದಲಾವಣೆ ಮಾಡಲಾಗಿದೆ. ಪ್ರಸ್ತುತ ಭಾರತ ಜನಸಂಖ್ಯೆ 144 ಕೋಟಿಗೂ ಅಧಿಕ ಜನಸಂಖ್ಯೆ ಹೊಂದಿದೆ. ಆದ-ರಿಂದ ವಿಶ್ವದಲ್ಲಿ ಅತ್ಯಧಿಕ ಜನಸಂಖ್ಯೆ ಹೊಂದಿದ ರಾಷ್ಟ್ರವಾಗಿ ಹೊರಹೊಮ್ಮಿದೆ. ಆದರೆ ಇತ್ತಿಚಿನ ವರ್ಷಗಳಲ್ಲಿ ಭಾರತ ದೇಶದ ಜನನ ದರ 1.94 ಕ್ಕೆ ಕುಸಿದಿದೆ. ಇದು ಭವಿಷ್ಯದಲ್ಲಿ ಜನಸಂಖ್ಯೆಯ ಅಸಮತೋಲನಕ್ಕೆ ಕಾರಣವಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು. ಜಿಲ್ಲಾಸ್ಪತ್ರೆಯ ಶಸ್ತ್ರಚಿಕಿತ್ಸಕ ಡಾ. ಶಿವಾನಂದ ಮಾಸ್ತಿಹೊಳಿ ಮಾತನಾಡಿ, ವೃದ್ಧರ ಸಂಖ್ಯೆ ಹೆಚ್ಚಳಗೊಂಡು ದುಡಿಯುವ ಕೈಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಇದು ಮುಖ್ಯವಾಗಿ ದೇಶಕ್ಕೆ ಆರ್ಥಿಕ ದೃಷ್ಟಿಯಿಂದ ಅಪಾಯವಾಗುತ್ತದೆ ಎಂದರು. ಕುಟುಂಬ ಕಲ್ಯಾಣಾಧಿಕಾರಿ ಡಾ. ರಾಜೇಶ್ವರಿ ಗೋಲಗೇರಿ ಮತ್ತು ಅರವಳಿಕೆ ತಜ್ಞರಾದ ಡಾ. ಸಜ್ಜನ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಎಂ.ಬಿ.ಬಿರಾದಾರ, ತಾಲೂಕು ಆರೋಗ್ಯಾಧಿಕಾರಿ ಡಾ. ಕೆ.ಡಿ ಗುಂಡಬಾವಡಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಸುರೇಶ ಹೊಸಮನಿ, ಸುರೇಂದ್ರ ಮಾನಕರ, ಶಂಕರ ಚಲವಾದಿ, ರೇಖಾ ದಶವಂತ, ಮೋತಿಲಾಲ ಲವಾಣಿ, ಎನ್.ಆರ್. ಬಾಗವಾನ, ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಜು.16 ರಂದು ರೈತ ಸಂಘದಿಂದ ಬೃಹತ್ ಪ್ರತಿಭಟನೆ

■ ಉದಯರಶ್ಮಿ ದಿನಪತ್ರಿಕೆ




ತಾಳಿಕೋಟೆ: ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ವಾಸುದೇವ ಮೇಟಿ ಬಣ)ದ ನೇತೃತ್ವದಲ್ಲಿ ಇದೇ ದಿ. 16 ರಂದು ತಾಳಿಕೋಟೆ ನಗರದಲ್ಲಿ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ವಾಸುದೇವ ಮೇಟಿ) ಬಣದ ಯಾದಗಿರಿ ಜಿಲ್ಲಾ ಅಧ್ಯಕ್ಷ ಮಲ್ಲನಗೌಡ ಹಗರಟಗಿ ಅವರು ಹೇಳಿದರು.

ಮಂಗಳವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ವಾಸುದೇವ ಮೇಟಿ ಬಣ)ದ ನೇತೃತ್ವದಲ್ಲಿ ಕರೆಯಲಾದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಭಾಗದ ರೈತರ ಜೀವನಾಡಿಯಾಗಲಿರುವ ಬೂದಿಹಾಳ-ಫೀರಾಪೂರ ಏತ ನೀರಾವರಿ ಯೋಜನೆಯು ಮುಕ್ತಾಯ ಹಂತಕ್ಕೆ ಬಂದಿದ್ದು ಸದ್ಯ ಎಫ್‌ಐಸಿ ಕಾಲುವೆ ನಿರ್ಮಾಣ ಕಾಮಗಾರಿ ಆಬೇಕಾಗಿದೆ ಈ ಯೋಜನೆ ಪೂರ್ಣಗೊಳ್ಳುವದರಿಂದ ತಾಳಿಕೊಟೆ-ದೇವರ ಹಿಪ್ಪರಗಿ ಅವಳಿ ತಾಲೂಕಿನ 50 ಸಾವಿರ ಏಕರೆ ಭೂಮಿ ನೀರಾವರಿಗೆ ಒಳಪಡಲಿದೆ ಅಲ್ಲದೇ ಹುಣಸಗಿ-ಸುರಪೂರ ತಾಲೂಕಿನ 43 ಸಾವಿರ ಏಕರೆ ನೀರಾವರಿಗೆ ಒಳಪಡಲಿದೆ ಈ ಯೋಜನೆ ಪೂರ್ಣಗೊಳಿಸುವ ಸಲುವಾಗಿ ಕಳೆದ 2025ನೇ ಸಾಲಿನಲ್ಲಿ ಎಲ್ಲ ರೈತರು, ಸಂಘಟನೆಗಳು ಒಗ್ಗೂಡಿ ಕೊಡಗಾನೂರ ಕ್ರಾಸ್‌ನಲ್ಲಿ ಬೃಹತ್ ಪ್ರಮಾಣದ ಹೋರಾಟ ಮಾಡಲಾಗಿತ್ತು ಆಸಮಯದಲ್ಲಿ ಜಿಲ್ಲಾ ಉಸ್ತುವಾರಿ ಸಚೀವರಾಗಿದ್ದ ಎಂ.ಬಿ.ಪಾಟೀಲ ಅವರು ಸ್ಥಳಕ್ಕೆ ಬೆಟ್ಟಿ ನೀಡಿ ಅಲ್ಪದುಡ್ಡಿನಲ್ಲಿ ಕಾಮಗಾರಿ ಮುಗಿಯುತ್ತದೆ ಸೀಘ್ರವೇ ಮಾಡಿಸಿಕೊಡುತ್ತೇನೆಂದು 3 ತಿಂಗಳು ಸಮಯ ಅವಕಾಶ ತೆಗೆದುಕೊಂಡಿದ್ದರು. ಆದರೆ ವರ್ಷ ಕಳೆಯಲು ಬಂದರೂ ಕೂಡಾ ಯೋಜನೆಯ ಕಾರ್ಯಗತದ ಬಗ್ಗೆ ಚಕಾರ ಶಬ್ದ ಎತ್ತುತ್ತಿಲ್ಲಾ ಹೀಗಾಗಿ ರೈತರ ಕಾಳಜಿ ಇಲ್ಲದ ಸರ್ಕಾರವನ್ನು ಎಚ್ಚರಿಸುವ ಸಲುವಾಗಿ ಇದೇ ದಿ. 16 ರಂದು ಬೃಹತ್ ಪ್ರಮಾಣದ ಹೋರಾಟ ತಾಳಿಕೋಟೆ ನಗರದಲ್ಲಿ ನಡೆಯಲಿದೆ.

ಅಂದು ಬೆಳಿಗ್ಗೆ 11 ಗಂಟೆಗೆ ಡಾ.ಬಿ.ಆರ್ ಅಂಬೇಡ್ಕರ್ ವೃತ್ತದಿಂದ ಕತ್ರಿ ಭಜಾರ ಮಾರ್ಗವಾಗಿ ಶಿವಾಜಿ ಮಹಾರಾಜರ ವೃತ್ತದ ಮೂಲಕ ಬಸವೇಶ್ವರ ಸರ್ಕಲ್‌ಗೆ ಆಗಮಿಸಿ ಸುಮಾರು 2 ಗಂಟೆಕಾಲ ರಸ್ತೆತಡೆ ನಡೆಸಲಾಗುವುದು. ಸುಮಾರು2 ಸಾವಿರದಿಂದ 3 ಸಾವಿರ ರೈತರು ಪಾಲ್ಗೊಳ್ಳುವ ನಿರಿಕ್ಷೆ ಇದೆ ಎಂದರು.

ರೈತ ಸಂಘದ ರಾಜ್ಯ ಸಂಚಾಲಕರಾದ ಮುತ್ತುಗೌಡ ಪರಸನಳ್ಳಿ ಮತ್ತು ಸಂಗನಗೌಡ ಹೆಗರೆಡ್ಡಿ ಮಾತನಾಡಿದರು.

ಈ ಸಮಯದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ವಾಸುದೇವ ಮೇಟಿ) ಬಣದ ರಾಜ್ಯ ಸಂಘಟನಾ ಕಾರ್ಯದರ್ಶಿ ಬಿ.ಬಿ.ಪಾಟೀಲ(ಮುರಾಳ), ರಾಜ್ಯ ಕಾರ್ಯದರ್ಶಿ ಗುರುನಾಥರೆಡ್ಡಿ ಹದನೂರ, ಜಿಲ್ಲಾ ಉಪಾಧ್ಯಕ್ಷ ಬಸನಗೌಡ ಮಾಲಿಪಾಟೀಲ, ಎಂ.ಎಂ.ಪಾಟೀಲ, ಮಡುಸಾಹುಕಾರ ಬಿರಾದಾರ, ರಾಜುಗೌಡ ಗುಂಡಕನಾಳ, ಪ್ರಭುಗೌಡ ನಾಡಗೌಡ, ರಾಜುಗೌಡ ಕೊಳೂರ, ಪಂಚಯ್ಯ ಹಿರೇಮಠ, ಮುತ್ತು ಜಾಹಗೀರದಾರ, ಶರಣಗೌಡ ಪಾಟೀಲ, ಮೊದಲಾದವರು ಉಪಸ್ಥಿತರಿದ್ದರು.

### ಬೂದಿಹಾಳ-ಫೀರಾಪೂರ ನೀರಾವರಿ ಯೋಜನೆ ಪೂರ್ಣಗೊಳಿಸಲು ಹಾಗೂ ಬರಪೀಡಿತ ಜಿಲ್ಲೆ ಘೋಷಣೆಗೆ ಒತ್ತಾಯ

## ಜು.17 ರಂದು ರಿಯಾಯಿತಿ ದರದಲ್ಲಿ ಮೀನುಮರಿಗಳ ಮಾರಾಟ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಇಲ್ಲಿನ ಭೂತನಾಳದಲ್ಲಿರುವ ಮೀನುಗಾರಿಕೆ ಸಂಶೋಧನಾ ಮತ್ತು ಮಾಹಿತಿ ಕೇಂದ್ರದಲ್ಲಿ ಜುಲೈ 17 ರಂದು ಕಟ್ಲಾ ಮತ್ತು ರೋಹು ತಳಿಯ ಮೀನುಮರಿಗಳ ಮಾರಾಟ ವ್ಯವಸ್ಥೆಯನ್ನು ಹಮ್ಮಿಕೊಳ್ಳಲಾಗಿದೆ. ಆಸಕ್ತರು ಕೇವಲ 1 ರೂಪಾಯಿಯಂತೆ ರಿಯಾಯಿತಿ ದರದಲ್ಲಿ ಮೀನುಮರಿಗಳನ್ನು ಖರೀದಿಸಬಹುದಾಗಿದೆ ಎಂದು ಕೇಂದ್ರದ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ರೈತರು ಹಾಗೂ ಮೀನುಗಾರರು ಇದರ ಸದುಪಯೋಗ ಪಡೆದುಕೊಳ್ಳುವಂತೆಯೂ ಮೀನುಮರಿಗಳನ್ನು ಖರೀದಿಸಲು ಬರುವವರು ಕಡ್ಡಾಯವಾಗಿ ತಮ್ಮ ಆಧಾರ್ ಕಾರ್ಡ್ ಪ್ರತಿಯನ್ನು ತರಲು ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ : 9945959704, 9900776205 ಅಥ-ವಾ 9480518679 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಭೂತನಾಳ ಕೇಂದ್ರದ ಸಹಾಯಕ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನ್ನಭಾಗ್ಯ ಯೋಜನೆಯಡಿ ಜುಲೈ ತಿಂಗಳ ಪಡಿತರ ಹಂಚಿಕೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ ಹಾಗೂ ಅನ್ನಭಾಗ್ಯ ಯೋಜನೆಯಡಿ ಜುಲೈ 2026 ನೇ ತಿಂಗಳಿಗೆ ಆಹಾರ ಧಾನ್ಯಗಳನ್ನು ಹಂಚಿಕೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ತಿಳಿಸಿದ್ದಾರೆ. 1 ರಿಂದ 3 ಸದಸ್ಯ-ರಿರುವ ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಗೆ 35 ಕೆಜಿ. ಇದರಲ್ಲಿ 21 ಕೆಜಿ ಜೋಳ ಹಾಗೂ ಇನ್ನುಳಿದಂತೆ 14 ಕೆಜಿ ಅಕ್ಕಿ, ಅದರಂತೆ 4 ಹಾಗೂ ಅದಕ್ಕಿಂತ ಹೆಚ್ಚಿನ ಸದಸ್ಯರಿರುವ ಅಂತ್ಯೋದಯ ಅನ್ನ ಪಡಿತರ ಚೀಟಿಗೆ ಪ್ರತಿ ಸದಸ್ಯರಿಗೆ 10 ಕೆ-ಜಿಯಂತೆ ಲೆಕ್ಕಾಚಾರದಡಿ 21 ಕೆಜಿ ಜೋಳ ಮತ್ತು ಇನ್ನುಳಿದಂತೆ ಅಕ್ಕಿಯನ್ನು ಹಂಚಿಕೆ ನೀಡಲಾಗಿದೆ ಎಂದವರು ತಿಳಿಸಿದ್ದಾರೆ. ಬಿಪಿಎಲ್ ಪಡಿತರ ಚೀಟಿಯ ಪ್ರತಿ ಸದಸ್ಯರಿಗೂ 3 ಕೆಜಿ ಜೋಳ ಹಾಗೂ 7 ಕೆಜಿ ಅಕ್ಕಿಯಂತೆ ಹಂಚಿಕೆ ನೀಡಲಾಗಿರುತ್ತದೆ. ಪಡಿತರ ಚೀಟಿದಾರರು ಆಯಾ ನ್ಯಾಯ ಬೆಲೆ ಅಂಗಡಿಯಲ್ಲಿ ಬಯೋಮೆಟ್ರಿಕ್ ನೀಡಿ ಪಡಿತರ ವಸ್ತುಗಳನ್ನು ಪಡೆಯಬಹುದಾಗಿದೆ.

ಸಾರ್ವಜನಿಕ ವಿತರಣಾ ಪದ್ಧತಿಯಡಿ ಹಂಚಿಕೆ ಮಾಡಲಾಗಿರುವ ಆಹಾರ ಧಾನ್ಯಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡದೇ ಸದುದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳಲು ಈ ಮೂಲಕ ಸೂಚಿಸಲಾಗಿದೆ. ಒಂದು ವೇಳೆ ಮಾರಾಟ ಮಾಡುವುದು ಕಂಡು ಬಂದಲ್ಲಿ ಅಂತಹ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗುವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ಎಚ್ಚರಿಕೆ ನೀಡಿದ್ದಾರೆ.

## ಎಸ್‌ಐಆರ್ ಗೆ ಅಡ್ಡಿಪಡಿಸಿದರೆ ಕಾನೂನು ಕ್ರಮ :ಮೆಕ್ಕಳಕಿ ಎಚ್ಚರಿಕೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರ ವಿಧಾನಸಭಾ ಮತಕ್ಷೇತ್ರದ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಚುನಾವಣಾ ಕೆಲಸದಲ್ಲಿ ಅಡ್ಡಿಪಡಿಸುತ್ತಿರುವ ಸಂಗತಿಗಳು ಗಮನಕ್ಕೆ ಬಂದಿದ್ದನ್ನು ಗಂಭೀರವಾಗಿ ಪರಿಗಣಿಸಿದ್ದು, ಸಿಬ್ಬಂದಿಯ ಕರ್ತವ್ಯಕ್ಕೆ ಮತ್ತೆ ಅಡಚಣೆಯನ್ನುಂಟು ಮಾಡಿದಲ್ಲಿ ಅಂತಹವರ ವಿರುದ್ಧ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಮತದಾರರ ನೋಂದಣಿ ಅಧಿಕಾರಿಯೂ ಆಗಿರುವ ಮಹಾನಗರ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಅವರು ಎಚ್ಚರಿಕೆ ನೀಡಿದ್ದಾರೆ.

ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತಗಟ್ಟೆ ಮಟ್ಟದ ಅಧಿಕಾರಿಗಳು ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆಯನ್ನು ಕಾಯ್ದುಕೊಳ್ಳಲು ಮನೆ ಮನೆ ಸಮೀಕ್ಷೆ ಕಾರ್ಯ ಕೈಗೊಂಡಿದ್ದಾರೆ. ಈ ಕಾರ್ಯ ಪ್ರಗತಿಯಲ್ಲಿದೆ. ಹಾಗಾಗಿ ಸಾರ್ವಜನಿಕರು ಬಿಎಲ್ ಒ ಗಳಿಗೆ ಸಹಕರಿಸುವುದು ಆದ್ಯ ಕರ್ತವ್ಯವಾಗಿದೆ ತಿಳಿಸಿದ್ದಾರೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಈಗಾಗಲೇ ರಾಜಕೀಯ ಪಕ್ಷಗಳ ಸಭೆ ಕರೆದು, ಆಯಾ ಪಕ್ಷಗಳಿಂದ ಬಿಎಲ್ ಎ ಗಳನ್ನು ನೇಮಕ ಮಾಡಲಾಗಿದೆ. ಈ ಬಿಎಲ್ ಎಗಳು ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಮತದಾರರ ಮನೆ ತೋ-ರಿಸುವ ಮೂಲಕ ಸಹಕಾರ ನೀಡುತ್ತಿದ್ದಾರೆ. ಆದರೆ ಇತ್ತೀಚಿಗೆ ವಿಜಯಪುರ ನಗರ ಮತಕ್ಷೇತ್ರದ ಮತಗಟ್ಟೆ ಮಟ್ಟದ ಅಧಿಕಾ-ರಿಗಳಿಗೆ ಅನಗತ್ಯ ಮಾಹಿತಿ ಕೇಳಿ ಬೆದ-ರಿಕೆಯೊಡ್ಡುತ್ತಿದ್ದಾರೆ. ಇದರಿಂದಾಗಿ ಅವರಿಗೆ ಎಸ್ ಐಆರ್ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಲು ತೊಂದರೆಯಾಗುತ್ತಿದೆ ಎಂದು ಬಿಎಲ್ ಒಗಳು ಎಸ್ ಐಆರ್ ಪ್ರಕ್ರಿಯೆ ವೀಕ್ಷಣೆ ಸಮಯದಲ್ಲಿ ಮತ್ತು ಗೂಗಲ್ ಮೀಟ್ ಸಭೆಯಲ್ಲಿ ನಮ್ಮ ಗಮನಸೆಳೆದಿದ್ದಾರೆ. ಮಹಾನಗರ ಪಾಲಿಕೆಯಿಂದ ಕಾಲ ಕಾಲಕ್ಕೆ ರಾಜಕೀಯ ಪಕ್ಷಗಳ ಸಭೆ ನಡೆಸಿ ಎಸ್ ಐಆರ್ ಮಾಹಿತಿ ನೀಡಲಾಗುತ್ತಿದೆ. ರಾಜಕೀಯ ಪಕ್ಷದ ಮುಖಂಡರು ಹಾಗೂ ಪದಾಧಿಕಾರಿಗಳಿಗೆ ಮಾಹಿತಿ ಅವಶ್ಯವಿದ್ದಲ್ಲಿ ತಮ್ಮ ಪಕ್ಷದಿಂದ ನೇಮಕವಾದ ಬಿಎಲ್ ಎಗಳಿಂದ ಪಡೆದುಕೊಳ್ಳಬಹುದು. ಇಲ್ಲವೇ ಮಹಾನಗರ ಪಾಲಿಕೆ ಚುನಾವಣಾ ಶಾಖೆಯಿಂದ ಪಡೆದುಕೊಳ್ಳಬಹುದಾಗಿದೆ. ಆದರೆ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಅನಗತ್ಯ ಮಾಹಿತಿ ಕೇಳುತ್ತಿರುವದ-ರಿಂದ ಎಸ್ ಐಆರ್ ಕಾರ್ಯಕ್ಕೆ ಕುಂಠಿತವಾಗುತ್ತಿದೆ. ಈ ಕಾರ್ಯಕ್ಕೆ ತೊಂದರೆ ಮಾಡುವುದು ಕಂಡುಬಂದಲ್ಲಿ, ಅಂತಹವರ ವಿರುದ್ಧ ಚುನಾವಣಾ ಆಯೋಗದ ನಿರ್ದೇಶನದ ಪ್ರಕಾರ ಮುಲಾಜಿಲ್ಲದೇ ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 56,29,171 ರೂ. ದಂಡ ವಿಧಿಸಿದ ಕೋರ್ಟ್

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2025-2026 ನೇ ಸಾಲಿನಲ್ಲಿ ಹೆಸ್ಕಾಂ ಜಾಗೃತದಳದ ಪೊಲೀಸ್ ಠಾಣೆಯಲ್ಲಿ ದಾಖಲಾದ 208 ಪ್ರಕರಣಗಳನ್ನು 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಲೋಕ್ ಅದಾಲತ್ ಮೂಲಕ ಇತ್ಯರ್ಥಪಡಿಸಿ, 56,29,171 ರೂ. ದಂಡ ವಿಧಿಸಿದೆ. 1ನೇ ಪ್ರಕರಣದ ಆರೋಪಿಗಳಿಗೆ 17,97,319 ರೂ. ದಂಡ, 2ನೇ ಪ್ರಕರಣದ ಆರೋಪಿಗಳಿಗೆ 8,09,353 ರೂ. ಗಳನ್ನು ನ್ಯಾಯಾಲಯ ದಂಡ ವಿಧಿಸಿದೆ. ಹೆಸ್ಕಾಂ ಜಾಗೃತದಳದ ಅಧಿಕಾರಿಗಳಾದ ಚಂದ್ರಪ್ಪ ಚಿಕ್ಕೋಡಿ, ಎಇಇ ಕೋಟ್ರಪ್ಪ ಹರನಾಳ, ಪಿಎಸ್ ಐ ಸುರೇಖಾ ಗಲಗಲಿ, ಎಇ ಸಂತೋಷ ರಾಠೋಡ ಹಾಗೂ ಹೆಸ್ಕಾಂ ಜಾಗೃತದಳ ಠಾಣೆ ಸಿಬ್ಬಂದಿ ಖಚಿತ ಮಾಹಿತಿ ಆಧರಿಸಿ ದಾಳಿ ನಡೆಸಿ ಪ್ರಕರಣ ದಾಖಲಿಸಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

## ಬಬಲೇಶ್ವರದಲ್ಲಿ ಎಸ್ ಐಆರ್ ಶೇ. 99.84 ರಷ್ಟು ಪ್ರಗತಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಬಲೇಶ್ವರ ವಿಧಾನಸಭಾ ಮತಕ್ಷೇತ್ರದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)ಗೆ ಸಂಬಂಧಿಸಿದಂತೆ ಮತಕ್ಷೇತ್ರದ ರಾಜಕೀಯ ಪಕ್ಷದ ಮುಖಂಡರೊಂದಿಗೆ ನಗರದ ಉಪ ವಿಭಾಗಾಧಿಕಾರಿಗಳ ಕಚೇರಿಯಲ್ಲಿ ಸಭೆ ನಡೆಯಿತು. ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ ಮಾತನಾಡಿ, ಬಬಲೇಶ್ವರ ಮತಕ್ಷೇತ್ರದ ಒಟ್ಟು 2,25,779 ಮತದಾರರ ಪೈಕಿ 2,25,421 ಮತದಾರರಿಗೆ ಗಣತಿ ನಮೂನೆ ವಿತರಿಸಲಾಗಿದ್ದು, ಶೇ. 99.84 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದರು. ಮತದಾರರಿಂದ ಗಣತಿ ನಮೂನೆಗಳನ್ನು ಭರ್ತಿ ಮಾಡಿ ರುಜು ಪಡೆದು ಮರಳಿ ಬಿ.ಎಲ್.ಓ ತಂತ್ರಾಂಶದಲ್ಲಿ ಗಣಕೀಕರಣಗೊಂಡ ಒಟ್ಟು 77,157 ಗಣತಿ ನಮೂನೆಗಳನ್ನು ಸ್ವೀಕರಿಸಲಾಗಿದೆ. ಶೇ. 34.17 ರಷ್ಟು ಪ್ರಗತಿಯಾಗಿದೆ ಎಂದರು.




## ಎಸ್‌ಆರ್ ಸಾಧನೆ: ಬಬಲೇಶ್ವರ ಮತಗಟ್ಟೆ ಅಧಿಕಾರಿಗಳಿಗೆ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಬಲೇಶ್ವರ ವಿಧಾನಸಭಾ ಮತಕ್ಷೇತ್ರದಲ್ಲಿ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಅವಧಿಗೆ ಮುನ್ನವೇ ಶೇ. ನೂರರಷ್ಟು ಪ್ರಗತಿ ಸಾಧಿಸಿದ ಮತಗಟ್ಟೆ ಅಧಿಕಾರಿಗಳನ್ನು ನಗರದ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಸನ್ಮಾನಿಸಲಾಯಿತು.

ಬಬಲೇಶ್ವರ ವಿಧಾನಸಭಾ ಮತಕ್ಷೇತ್ರದ ಒಟ್ಟು 244 ಮತಗಟ್ಟೆಗಳ ಪೈಕಿ ಪ್ರಥಮವಾಗಿ ತಿಕೋಟಾ ತಾಲೂಕಿನ ಧನರ್ಗಿ ಗ್ರಾಮದ ಭಾಗ ಸಂಖ್ಯೆ-60 ರ ಮತಗಟ್ಟೆ ಮಟ್ಟದ ಅಧಿಕಾರಿ ಎಸ್. ಬಿ. ಮಡಸನಾಳ ಹಾಗೂ ಮತಗಟ್ಟೆ ಮೇಲ್ವಿಚಾರಕರಾದ ಶ್ರೀಮತಿ ಜ್ಯೋತಿ ಕೊಣ್ಣೂರ ಅವರನ್ನು ಮೇಲಧಿಕಾರಿಗಳು ಸನ್ಮಾನಿಸಿದರು.

ಈ ಸಿಬ್ಬಂದಿ ಬಲೇಶ್ವರ ವಿಧಾನಸಭಾ ಮತಕ್ಷೇತ್ರದಲ್ಲಿ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಅವಧಿಗೆ ಮುನ್ನವೇ ಶೇ.ನೂರರಷ್ಟು ಪ್ರಗತಿ ಸಾಧಿಸಿದ್ದಾರೆ. ಈ ಇಬ್ಬರು ಮತಗಟ್ಟೆ ಅಧಿಕಾ-ರಿಗಳು ಎನ್ಯುಮರೇಶನ್ ಫಾರ್ಮಗಳ ಹಂಚಿಕೆ ಹಾಗೂ ಡಿಜಿಟೈಜೇಶನ್ ಕಾರ್ಯವನ್ನು ನಿಗದಿತ ಅವಧಿಗಿಂತ ಮುನ್ನವೇ ಮುಗಿಸಿದ್ದರಿಂದ ಸನ್ಮಾನಿಸಲಾಯಿತು. ಉಪವಿಭಾಗಾಧಿಕಾರಿಗಳಾದ ಗುರುನಾಥ ದಡ್ಡೆ, ಬಬಲೇಶ್ವರ ತಹಶೀಲ್ದಾರ್ ಶಾಂತಲಾ ಚಂದನ್, ತಿಕೋಟಾ ತಹಶೀಲ್ದಾರ್ ಸುರೇಶ ಚವಲರ್ ಸೇರಿದಂತೆ ಅಧಿಕಾರಿ, ಸಿಬ್ಬಂದಿ ಇದ್ದರು.

## ತರಬೇತಿಗೆ ಕಾನೂನು ಪದವೀಧರರಿಂದ ಅರ್ಜಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026-27ನೇ ಸಾಲಿಗಾಗಿ ನ್ಯಾಯಾಂಗ ಆಡಳಿತದಲ್ಲಿ ಕಾನೂನು ಪದವೀಧರರನ್ನು ತರಬೇತಿಗೆ ಆಯ್ಕೆ ಮಾಡಲು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅರ್ಜಿ ಆಹ್ವಾನಿಸಿದೆ.


ಹಿಂದುಳಿದ ವರ್ಗಗಳಾದ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಪ್ರವರ್ಗಗಳಿಗೆ ಸೇರಿದ ಕಾನೂನು ಪದವೀಧರರಿಂದ ದ್ವಿ- ಪ್ರತಿಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಜು. 13ರಿಂದ ಆಗಸ್ಟ್ 13ರೊಳಗಾಗಿ ಅರ್ಹ ಪದವೀಧರರು ಅರ್ಜಿ ಸಲ್ಲಿಸಬಹುದಾಗಿದೆ. ನಿಗದಿತ ಅರ್ಜಿ ನಮೂನೆಗಳನ್ನು ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಪಡೆಯಬುದಾಗಿದೆ.ಈ ತರಬೇತಿಗೆ ಹಿಂದುಳಿದ ವರ್ಗಗಳಿಗೆ ಸೇರಿದ 10 ಕಾನೂನು ಪದವೀಧರರನ್ನು ಆಯ್ಕೆ ಮಾಡಲಾಗುವುದು. ಪ್ರವರ್ಗ-1, ರ ಅಭ್ಯರ್ಥಿಗಳಿಗೆ 3.50 ಲಕ್ಷ, 3(ಬಿ) ವರ್ಗಗಳಿಗೆ 2.50 ಲಕ್ಷಗಳ ವಾರ್ಷಿಕ ಆದಾಯ ಮಿತಿಯಿದೆ. ತರಬೇತಿ ಅವಧಿಯು 4 ವರ್ಷಗಳಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಸಿಕ 4000 ರೂ. ತರಬೇತಿ ಭತ್ಯೆ ನೀಡಲಾಗುವುದು.

ಅರ್ಜಿ ಸಲ್ಲಿಸುವ ಪ್ರವರ್ಗ-1, 40ವರ್ಷ, 2(ಎ), 3(ಎ) ಹಾಗೂ 3(ಬಿ) ಅಭ್ಯರ್ಥಿಗಳಿಗೆ 38 ವರ್ಷಗಳು ಮೀರಿರಬಾರದು. ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ ಅಪೂರ್ಣ, ತಡವಾಗಿ ಬಂದ ಎಲ್ಲ ಅರ್ಜಿಗಳು ಮತ್ತು ಷರತ್ತುಗಳನ್ನು ಪೂರೈಸದ ಅರ್ಜಿಗಳನ್ನು ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದ ನೀಡದೇ ತಿರಸ್ಕ-ರಿಸಲಾಗುವುದು. ಪೂರ್ಣವಾಗಿರುವ ಮತ್ತು ಷರತ್ತುಗಳನ್ನು ಪೂರೈಸಿದ ಅರ್ಜಿಗಳನ್ನು ಸಲ್ಲಿಸಿದ ಅರ್ಜಿದಾರರನ್ನು ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು. ಆಯ್ಕೆ ಸಮಿತಿಯು ಅಭ್ಯರ್ಥಿಗಳ ಆಯ್ಕೆ ಮಾಡಲಾಗುವುದು. ಪ್ರವರ್ಗ-1ರಲ್ಲಿ ಇರುವ ಅರ್ಹ ಅಭ್ಯರ್ಥಿಗಳು ದೊರಕದೇ ಇದ್ದಲ್ಲಿ 2(ಎ), 3(ಎ) ಹಾಗೂ 3(ಬಿ) ಇವುಗಳಲ್ಲಿ ಬರುವ ಅಭ್ಯರ್ಥಿಗಳಲ್ಲಿ ಶೇಕಡಾವಾರು ಮೀಸಲಾತಿಯಂತೆ ಆಯ್ಕೆ ಮಾಡಲಾಗುವುದು. ಜಿಲ್ಲಾ ಕೇಂದ್ರ ಸ್ಥಾನದಲ್ಲಿ ಆಯ್ಕೆ ಮಾಡಲಾದ ಅಭ್ಯರ್ಥಿಗಳನ್ನು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರರಿಂದ, ಜಿಲ್ಲಾ ಸರ್ಕಾರಿ ವಕೀಲರಿಂದ ಅಥವಾ 15 ವರ್ಷಗಳಿಗೆ ಕಡಿಮೆ ಇಲ್ಲದ ಸೇವೆಯನ್ನು ವಕೀಲ ವೃತ್ತಿಯಲ್ಲಿ ಪೂರೈಸಿದ ವಕೀಲರ ಅಧೀನದಲ್ಲಿ ತರಬೇತಿ ಪಡೆಯಬೇಕು. ಅದೇ ರೀತಿ ತಾಲೂಕಾ ಮಟ್ಟದ ಬಾರ್ ಅಸೋಸಿಯೇಷನ್‌ದಲ್ಲಿ ವಕೀಲ ವೃತ್ತಿ ಮಾಡುವ ಅಭ್ಯರ್ಥಿಗಳು ಆಯ್ಕೆಯಾದಲ್ಲಿ ಜೆ.ಎಂ.ಎಫ್. ನ್ಯಾಯಾಲಯದಲ್ಲಿರುವ ಸಹಾಯಕ ಸರ್ಕಾರಿ ವಕೀಲರುಗಳಲ್ಲಿ ತರಬೇತಿ ಪಡೆಯಬೇಕಾಗುತ್ತದೆ. ತರಬೇತಿ ಅವಧಿಯಲ್ಲಿ ಮಧ್ಯದಲ್ಲಿ ಅಭ್ಯರ್ಥಿಗಳು ತರಬೇತಿಯನ್ನು ಬಿಡಕೂಡದು. ಅಭ್ಯರ್ಥಿಗಳು ಕಾನೂನು ಪದವಿ ಪರೀಕ್ಷೆಯಲ್ಲಿ (ಪ್ರಾಕ್ಟಿಸಿಗೆ ನಿಗದಿಪಡಿಸಿದ ಕ್ವಾಲಿಫೀಕೇಶನ್) ಉತ್ತೀರ್ಣರಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಅಂತಿಮ ದಿನಾಂಕದಂದು 2 ವರ್ಷದೊಳಗಿರಬೇಕು. ಅಭ್ಯರ್ಥಿಗಳು ಆಯ್ಕೆ ಸಮಿತಿಯು ಸೂಚಿಸಿದ ಎಲ್ಲ ದಾಖಲಾತಿಗಳನ್ನು ದೃಢೀಕರಿಸಿ ಅರ್ಜಿಯ ಜೊತೆಗೆ ಲಗತ್ತಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ತಿಕೋಟಾ ತಾಲೂಕನ್ನು ಬರಗಾಲವೆಂದು ಘೋಷಣೆ ಮಾಡಿ । ರೈತರ ಸಾಲ ಮನ್ನಾ ಮಾಡಬೇಕು । ರೈತ ಸಂಘ ತಾಲೂಕಾದ್ಯಕ್ಷ ಸಾತಲಿಂಗಯ್ಯಾ ಸಾಲಿಮಠ ಆಗ್ರಹ

## ತುಬಚಿ-ಬಬಲೇಶ್ವರ ಏತ ನೀರಾವರಿಯಿಂದ ನೀರು ಹರಿಸಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ತಿಕೋಟಾ: ಮುಂಗಾರು ಹಂಗಾಮು ಮಳೆ ಕೈಕೊಟ್ಟಿದ್ದರಿಂದ ಹಿಂಗಾರಿ ಮಳೆಯ ಲಕ್ಷಣ ಕೂಡ ಇರದೆ ಇರುವದರಿಂದ ಅನ್ನದಾತರು ಮತ್ತೆ ಸಂಕಷ್ಟಕ್ಕೆ ಸಿಲುಕುವಂತಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕಾದ್ಯಕ್ಷ ಸಾತಲಿಂಗಯ್ಯಾ-ಶಂ ಸಾಲಿಮಠ ಅವರು ಗ್ರೇಡ2 ತಹಸೀಲ್ದಾರ ಎಚ್ ಎನ್ ಬಡಿಗೇರ ಅವರ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಅವರು, ತಾಲೂಕನ್ನು 2026 ಮತ್ತು 2027ಸಾಲಿನ ಮಳೆಯ ಅಭಾವದಿಂದ ರೈತರು ಕಣ್ಣಿರು ಹಾಕುವ ಪರಿಸ್ತಿತಿ ಎದುರಾಗಿದ್ದು ಸರಕಾರ ಕೂಡಲೆ ಬರಗಾಲವೆಂದು ಘೋಷಣೆಯೊಂದಿಗೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಬೇಕು. ರೈತರು ಪಡೆದಿರುವ ಕೃಷಿ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕೆಂದು ಅಗ್ರಹಿಸಿದರು.

ನಂತರ ಜಿಲ್ಲಾದ್ಯಕ್ಷ ಸಂಗಮೇಶ ಸಗರ ಮಾತನಾಡಿ, ತಾಲೂಕಾದ್ಯಂತ ಕೆರೆ, ಹಳ್ಳಕೊಳ್ಳಗಳಲ್ಲಿ ಒಂದೆ ಒಂದು ಹನಿ ನೀರಿಲ್ಲ ಇನ್ನು ಎಂಟು ದಿನ ಕಳೆದರೆ ಜಾನುವಾರಗಳಿಗೆ, ಜನರಿಗೆ, ಪಶುಪಕ್ಷಿಗಳಿಗೆ ನೀರು ಸಿಗೋದಿಲ್ಲ ಇಗಾಗಲೆ ಬೋರವೆಲ್ಲಗಳು ಬತ್ತಿವೆ ಅರ್ದ ಗಂಟೆಯು ಕೂಡಾ ನೀರು ಬರುತ್ತಿಲ್ಲ ಸುಮಾರು ಹತ್ತಾರು ಗ್ರಾಮಗಳ ಕೆರೆಗಳಲ್ಲಿ ನೀರಿಲ್ಲ ಮುಂದಿನ ದಿನಗಳನ್ನು ಕಳೆಯುವದು ಕಷ್ಟದ ಮಾತು ಸರಕಾರ ಕೂಡಲೆ ತಾಲೂಕಿನಾದ್ಯಂತ ನೀರು ಹರಿಸಬೇಕು, ಸಾಲ ಮನ್ನಾ ಮಾಡಬೇಕು, ತಿಕೋಟಾ ತಾಲೂಕ ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಬೇಕೆಂದು ಸರಕಾರಕ್ಕೆ ಒತ್ತಾಯಿಸುತ್ತೆವೆ. ಒಂದು ವೇಳೆ ಸರಕಾರ ಸ್ಪಂದಿಸದಿದ್ದಲ್ಲಿ ಉಗ್ರ ಹೋರಾಟ ಅನಿವಾರ್ಯವೆಂದು ಹೇಳಿದರು.

ರೈತ ಮಹಿಳಾ ಅದ್ಯಕ್ಷೆ ಸಂಗೀತಾ ರಾಠೋಡ, ಶ್ರೀಶೈಲ ಶಿ ಬಿರಾದಾರ, ಶಾನೂರ ನಂದರಗಿ, ದರೆಪ್ಪ ಅನಂತಪೂರ, ಶಿವಪ್ಪ ಪಟ್ಟಣಶೆಟ್ಟಿ, ನಜೀರ ನಂದರಗಿ, ಗುರುಪಾದ ಹಿಪ್ಪರಗಿ, ಸುರೇಶ ಇಟಿ, ಮೋಶಿನ ಮುಜಾವರ, ಸುರೇಶ ಕೋಣ್ಣೂರ, ರವಿಕುಮಾರ ಹೋಸುರ, ಶಿವಾನಂದ ಮುಂಜಾನವರ, ರಾಮಗೊಂಡ ಕೊಂಡಿ, ಬುಳ್ಳಪ್ಪ ಪೂಜಾರಿ, ಪರಗೊಂಡ ಬಡಿಗೇರ, ಸುಭಾಷ ಚಡಚಣ, ರಾಮಗೊಂಡ ಬಿರಾದಾರ, ಮತ್ತು ನೂರಾರು ರೈತರು ಉಪಸ್ಥಿತರಿದ್ದರು.

### ಲೋಕ್‌ಅದಾಲತ್ 879 ಪ್ರಕರಣಗಳು ರಾಜಿ ಸಂಧಾನದ ಮೂಲಕ ಇತ್ಯರ್ಥ । ನ್ಯಾಯಾಧೀಶರಾದ ಸಚಿನ್ ಕೌಶಿಕ್ ಅಭಿಮತ

## ಪ್ರಕರಣ ಶೀಘ್ರ ಇತ್ಯರ್ಥಪಡಿಸುವಲ್ಲಿ ಲೋಕ್ ಅದಾಲತ್ ಪಾತ್ರ ಅನನ್ಯ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ನ್ಯಾಯಾಂಗ ವ್ಯವಸ್ಥೆಯಲ್ಲಿ ಬಾಕಿ ಇರುವ ಪ್ರಕರಣಗಳನ್ನು ಸೌಹಾರ್ದಯುತವಾಗಿ ಹಾಗೂ ಶೀಘ್ರವಾಗಿ ಇತ್ಯರ್ಥಪಡಿಸುವಲ್ಲಿ ಲೋಕ್ ಅದಾಲತ್ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರೂ ಹಾಗೂ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಚಿನ್ ಕೌಶಿಕ್ ಅವರು ಹೇಳಿದರು.

ಪಟ್ಟಣದ ನ್ಯಾಯಾಲಯಗಳ ಸಂಕೀರ್ಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿಯ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಲೋಕ್ ಅದಾಲತ್ ನಲ್ಲಿ ಮಾತನಾಡಿದ ಅವರು ಲೋಕ್ ಅದಾಲತ್ ಮೂಲಕ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಬಗೆಹ-ರಿಸಿಕೊಳ್ಳುವುದರಿಂದ ಪಕ್ಷಗಾರರ ಸಮಯ, ಹಣ ಮತ್ತು ಶ್ರಮ ಉಳಿತಾಯವಾಗುತ್ತದೆ. ಅಲ್ಲದೆ, ದೀರ್ಘಕಾಲದ ನ್ಯಾಯಾಂಗ ಪ್ರಕ್ರಿಯೆಯಿಂದ ಉಂಟಾಗುವ ಮಾನಸಿಕ ಒತ್ತಡವೂ ನಿವಾರಣೆಯಾಗುತ್ತದೆ. ಹಾಗಾಗಿ ತಮ್ಮ ಪ್ರಕರಣಗಳನ್ನು ಲೋಕ್‌ಅದಾಲತ್ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಪಕ್ಷಗಾರರು ಮುಂದೆ ಬರಬೇಕು ಎಂದು ಕರೆ ನೀಡಿದರು. ಲೋಕ ಅದಾಲತ್ ನಲ್ಲಿ ಮೂರು ನ್ಯಾಯಾಲಯಗಳಿಗೆ ಸಂಬಂಧಿಸಿದಂತೆ ಒಟ್ಟು 7530 ಬಾಕಿ ಇರುವ ಪ್ರಕರಣಗಳಲ್ಲಿ 1906 ಪ್ರಕರಣಗಳನ್ನು ಕೈಗೆತ್ತಿಕೊಳ್ಳಲಾಗಿತ್ತು. ಈ ಪೈಕಿ ಒಟ್ಟು 879 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯಥ-ರ್ಪಡಿಸಲಾಗಿದೆ. ಅದರಲ್ಲಿ ಅಪರಾಧ ಪ್ರಕರಣಗಳು, ಎಂವಿಸಿ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಮೆಂಟೇನೆನ್ಸ್ ಪ್ರಕರಣಗಳು, ಪಾಲು ವಾಟ್ನಿ ದಾವೆಗಳು, ಎಲ್‌ಎಸಿ ಇಪಿ ಪ್ರಕರಣಗಳು, ಎಮ್‌ವಿಸಿ, ಇ.ಪಿ ಪ್ರಕರಣಗಳು, ಅಪರಾಧ ದಂಡ ಪ್ರಕರಣಗಳನ್ನು ರಾಜಿ ಸಂಧಾನ ಮೂಲಕ ಇತ್ಯರ್ಥ ಪಡಿಸಲಾಯಿತು.

ಪೂರ್ವದಾವೆ ಪ್ರಕರಣಗಳಲ್ಲಿ, ಕಂದಾಯ ಇಲಾಖೆಯ ಕಂದಾಯ ಅದಾಲತ್ ಪ್ರಕರಣಗಳು, ಬಿಎಸ್‌ಎನ್‌ಎಲ್ ಪ್ರಕರಣಗಳು ಹಾಗೂ ಬ್ಯಾಂಕಿನ ಪ್ರಕರಣಗಳು, ಒಟ್ಟು ಸೇರಿ 960 ಪ್ರಕರಣಗಳಲ್ಲಿ 277 ಪ್ರಕರಣಗಳು ರಾಜಿ ಸಂಧಾನದ ಮೂಲಕ ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರು ಹಾಗೂ 5ನೇ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ಸಚಿನ್ ಕೌಶಿಕ್ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರವೀಂದ್ರಕುಮಾರ ಕಟ್ಟಿಮನಿ, ಹಾಗೂ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಮತ್ತು ಸಿವಿಲ್ ನ್ಯಾಯಾಧೀಶರಾದ ರಾಮಮೂರ್ತಿ ಎನ್ ಇವರುಗಳು ರಾಜೀಸಂಧಾನದ ಮೂಲಕ ಇತ್ಯರ್ಥ ಪಡಿಸಿರುತ್ತಾರೆ.

ನ್ಯಾಯಾಂಗ ಸಂಧಾನಕಾರರಾಗಿ ಪಿ.ಬಿ.ಗೌಡರ, ಎಸ್.ಇ.ಹಿರೇಮಠ, ಯು.ಸಿ.ಉರಾನ್ ಭಾಗಿಯಾದರೆ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಶಶಿಕಾಂತ ಮಾಲಗತ್ತಿ, ಅಪರ್ ಸರ್ಕಾರಿ ವಕೀಲರಾದ ಎಚ್.ಎಲ್.ಸರೂರ, ನ್ಯಾಯವಾದಿಗಳಾದ ಎನ್.ಜಿ.ಕುಲಕರ್ಣಿ, ಚೇತನ ಶಿವಶಿಂಪಿ, ಎಸ್.ಎಂ.ಕಿಣಗಿ, ರವಿ ನಾಲತವಾಡ, ಐ.ಎಸ್.ಹಗಟಗಿ, ಎಚ್.ಟಿ.ಪೂಜಾರಿ, ಎಂ.ಬಿ.ಬಿರಾದಾರ, ಬಿ.ಎ.ನಾಡಗೌಡರ, ಮಲ್ಲಣ್ಣ ಅಸ್ಕಿ, ಸಿದ್ದಯ್ಯ ಹಿರೇಮಠ, ಎಂ.ಆರ್.ಪಾಟೀಲ, ಪಿ.ಎ.ಹಿರೇಮಠ, ಎಲ್.ಎಸ್.ಮೇಟಿ, ಎನ್.ಆರ್.ಮೊಕಾಶಿ, ನಾಗಭೂಷಣ ನಾವದಗಿ, ಎಸ್.ಆರ್.ಅಮರಣ್ಣವರ, ಎಂ.ಎ.ಲಿಂಗಸೂರ, ಪಿ.ಬಿ.ಜಾಧವ, ಆರ್.ಎಸ್.ಬಿರಾದಾರ, ಬಿ.ವಾಯ್.ಮೇಟಿ, ಎನ್.ಎಸ್.ಪಾಟೀಲ, ತಾಲೂಕು ಕಾನೂನು ಸೇವಾ ಸಮಿತಿಯ ಆಡಳಿತ ಸಹಾಯಕರಾದ ಅರವಿಂದ ಕುಂಬಾರ, ದಲಾಯತ್ ಮಹಾಂತೇಶ ಹಚರೆಡ್ಡಿ ನ್ಯಾಯಾಲಯದ ಸಿಬ್ಬಂದಿಗಳಾದ ವಾಯ್.ಎಮ್.ತಳವಾರ, ಜ್ಯೋತಿ ಹಕಾರಿ, ಸುರೇಶ ಬಳಗಾನೂರ, ಎಸ್.ಎಮ್.ಪೂಜಾರಿ, ಗಫೂರ ಜಾಹಗೀರದಾರ, ಬಿ.ಎಂ.ದೊಡ್ಡಮನಿ, ಪುನೀತ್ ಎನ್.ಆರ್, ಬಸವರಾಜ ಬೂದಿಹಾಳ, ಪ್ರಸನ್ನ ಎಸ್, ಅನಸೂಯಾ ಕರಡಿ, ರಾಮಣ್ಣ ಕಮ್ಮಾರ, ನರ್ಮದಾ ಮರೋಳ, ಆನಂದ ಪೂಜಾರಿ, ಗೀತಾ ರಾಂಪುರ್, ಬಿ.ಆರ್.ಕೋರಿ, ರೇಣುಕಾ ಜಾನಮಟ್ಟಿ, ಅಮೀದಾ ನದಾಫ್, ನಿಸಾರ ನೇಗಿನಾಳ, ಮಧು ಧರ್ಮಗಿರಿ, ನಾಗಮ್ಮ ಹೂಗಾರ, ಬಸವರಾಜ ದಡ್ಡಿ ಸೇರಿದಂತೆ ಎಲ್ಲ ಸಿಬ್ಬಂದಿ ಲೋಕ್‌ಅದಾಲತ್ ಗೆ ಶ್ರಮಿಸಿದರು.

> **ಲೋಕ್ ಅದಾಲತ್‌ನಲ್ಲಿ ಉಭಯ ಪಕ್ಷಗಳ ಸಮ್ಮತಿಯೊಂದಿಗೆ ಪ್ರಕರಣಗಳು ಇತ್ಯರ್ಥಗೊಳ್ಳುವುದ-ರಿಂದ ಸಂಬಂಧಗಳು ಉಳಿಯುತ್ತವೆ. ಗೆಲುವು-ಸೋಲಿಗಿಂತ ಪರಸ್ಪರ ಸಾಮರಸ್ಯ ಮತ್ತು ಶಾಶ್ವತ ಪರಿಹಾರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ. ಈ ಕಾರಣದಿಂದ ಸಾರ್ವಜನಿಕರು ಲೋಕ್ ಅದಾಲತ್‌ನ ಸದುಪಯೋಗವನ್ನು ಪಡೆದುಕೊಳ್ಳಬೇಕು.**
>
> **■ ಸಚಿನ್ ಕೌಶಿಕ್. ಅಧ್ಯಕ್ಷರು ತಾಲೂಕು ಕಾನೂನು ಸೇವಾ ಸಮಿತಿ, ಹಾಗೂ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.**

### ಎಚ್ ಡಿ ಕೋಟೆ ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ಗಾಯತ್ರಿ ರಾಜೇಗೌಡ ಕರೆ

## ಮಹಿಳಾ ಘಟಕಗಳನ್ನು ಸ್ಥಾಪಿಸಿ ಜೆಡಿಎಸ್ ಬಲವರ್ಧನೆಗೆ ಶ್ರಮಿಸಿ

■ ಉದಯರಶ್ಮಿ ದಿನಪತ್ರಿಕೆ



ಎಚ್ ಡಿ ಕೋಟೆ: ಅವಳಿ ತಾಲೂಕಿನಲ್ಲಿ ಮಹಿಳಾ ಘಟಕಗಳನ್ನು ಸ್ಥಾಪಿಸಿ ಜೆಡಿಎಸ್ ಪಕ್ಷದ ಬಲವರ್ಧನೆಗೆ ಕೆಲಸ ಮಾಡಬೇಕು ಮತ್ತು ಜೆಡಿಎಸ್ ಪಕ್ಷದ ಅಭ್ಯರ್ಥಿ ಕೆ.ಎಂ ಕೃಷ್ಣನಾಯಕ ಅವರನ್ನು ಮುಂದಿನ 2028 ರ ವಿಧಾನಸಭಾ ಚುನಾವಣೆಯಲ್ಲಿ ಗೆಲ್ಲಿಸಿ ಶಾಸಕರನ್ನಾಗಿ ಮಾಡುವ ಮೂಲಕ ತಾಲೂಕಿನ ಸರ್ವತೋಮುಖ ಅಭಿವೃದ್ಧಿಗೆ ಎಲ್ಲರೂ ಸಹಕರಿಸಬೇಕೆಂದು ಜೆಡಿಎಸ್ ತಾಲೂಕು ಮಹಿಳಾ ಘಟಕದ ಅಧ್ಯಕ್ಷೆ ಗಾಯತ್ರಿ ರಾಜೇಗೌಡ ಕರೆ ನೀಡಿದರು.

ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಹೆಚ್.ಡಿ. ಕೋಟೆ ಮತ್ತು ಸರಗೂರು ತಾಲೂಕಿನ ಮಹಿಳಾ ಪದಾಧಿಕಾರಿಗಳ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

2028 ವಿಧಾನಸಭೆ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿಯ ಗೆಲುವಿಗೆ ನಾವೆಲ್ಲ ಶ್ರಮಿಸಬೇಕಾಗಿದೆ. ಈ ನಿಟ್ಟಿನಲ್ಲಿ ಈಗಿನಿಂದಲೇ ಬೂತ್ ಮಟ್ಟದಲ್ಲಿ ಪಕ್ಷ ಸಂಘಟನೆ ಮಾಡಬೇಕಾಗಿದೆ. ಇದಕ್ಕೆ ಕಾರ್ಯಕರ್ತರ ಸಹಕಾರ ಬಹಳ ಮುಖ್ಯವಾಗಿದೆ ಎಂದು ಹೇಳಿದರು.

ಜೆಡಿಎಸ್ ಜಿಲ್ಲಾಧ್ಯಕ್ಷರಾದ ದ್ರಾಕ್ಷಾಯಿಣಿ ಎಂ.ಡಿ ಮಾತನಾಡಿ, ಹೆಚ್.ಡಿ.ಕೋಟೆಯಲ್ಲಿ ಮಹಿಳಾ ಘಟಕಗಳನ್ನ ಬಲವರ್ಧನೆ ಮಾಡುವ ಮೂಲಕ ಜೆಡಿ-ಎಸ್ ಪಕ್ಷ ಗೆಲ್ಲಿಸಲು ಶ್ರಮ ಹಾಕಬೇಕಾಗಿದೆ ಎಂದು ಹೇಳಿದರು.

ಹೆಚ್. ಡಿ. ಕೋಟೆ ಮತ್ತು ಸರಗೂರು ಜೆಡಿಎಸ್ ಅಧ್ಯಕ್ಷರಾದ ರಾಜೇಂದ್ರ, ಗೋಪಾಲಸ್ವಾಮಿ ಸಭೆಯ ಉದ್ದೇಶದ ಬಗ್ಗೆ ಮಾತನಾಡಿದರು.

ತಾಲೂಕು ಘಟಕದ ಅಧ್ಯಕ್ಷ ಸವಿತಾ, ತಾಲೂಕು ಹೆಚ್. ಡಿ. ಕುಮಾರಸ್ವಾಮಿ ಬಳಗದ ಅಧ್ಯಕ್ಷ ಎಚ್.ಎ ರಮೇಶ್, ತಾಲೂಕು ಪ್ರಧಾನ ಕಾರ್ಯದರ್ಶಿ ಕೃಷ್ಣಾಪುರ ಶಿವಕುಮಾರ್, ಮುಖಂಡರಾದ ಚಿಕ್ಕಮ್ಮ, ರತ್ನಮ್ಮ, ಮೀನಾ ಸುಧಾ, ನಾಗಮಣಿ, ಬಿಂದು, ರಾಜೇಶ್ವರಿ, ಮಾದೇವಿ, ಸಿಂಗಮ್ಮ, ಲಕ್ಷ್ಮಿ, ಪವಿತ್ರ, ರಾಜಮ್ಮ, ಪುಟ್ಟಚೆನ್ನಮ್ಮ, ಶಾಂತಮ್ಮ ಇನ್ನು ಹಲವಾರು ಮಹಿಳೆಯರು ಮತ್ತು ಮುಖಂಡರು ಭಾಗವಹಿಸಿದರು.



## ರಾಷ್ಟ್ರೀಯ ರೈತರ ಸಂಘದ ಪದಾಧಿಕಾರಿಗಳಿಂದ ಶಿರಸ್ತೇದಾರ ಸುರೇಶ ಮ್ಯಾಗೇರಿ ಅವರಿಗೆ ಮನವಿ ಸಲ್ಲಿಕೆ

# ದೇವರಹಿಪ್ಪರಗಿ ತಾಲ್ಲೂಕು ಬರಪೀಡಿತ ಪ್ರದೇಶವೆಂದು ಘೋಷಿಸಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ತಾಲ್ಲೂಕಿನಲ್ಲಿ ಸಮರ್ಪಕ ಮಳೆಯಾಗದೇ ಇದ್ದು ತಾಲ್ಲೂಕನ್ನು ಬರಪೀಡಿತ ಪ್ರದೇಶವೆಂದೂ ಘೋಷಿಸಿ, ರೈತರ ಸಾಲ ಮನ್ನಾ ಮಾಡುವಂತೆ ಆಗ್ರಹಿಸಿ ರಾಷ್ಟ್ರೀಯ ರೈತರ ಸಂಘದ ಪದಾಧಿಕಾರಿಗಳು ಶಿರಸ್ತೇದಾರ ಸುರೇಶ ಮ್ಯಾಗೇರಿ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯಕ್ಕೆ ಸೋಮವಾರ ಆಗಮಿಸಿದ ರಾಷ್ಟ್ರೀಯ ರೈತರ ಸಂಘದ ತಾಲ್ಲೂಕು ಘಟಕದ ಪದಾಧಿಕಾರಿಗಳು ತಾಲ್ಲೂಕಿನ ಎಲ್ಲ ಹಳ್ಳಿಗಳಲ್ಲಿ ಮುಂಗಾರು ಹಂಗಾಮಿನಲ್ಲಿ ಭಿತ್ತಿದ ತೊಗರಿ, ಹತ್ತಿ ಸೇರಿದಂತೆ ವಿವಿಧ ಬೆಳೆಗಳು ಮಳೆಯಿಲ್ಲದೆ ಹಾನಿಗೊಳಗಾದ ಬಗ್ಗೆ ಶಿರಸ್ತೇದಾರರ ಗಮನ ಸೆಳೆದರು.

ಈ ಸಂದರ್ಭದಲ್ಲಿ ರಾಜ್ಯ ಮಹಿಳಾ ಕಾರ್ಯದರ್ಶಿ ರೇಣುಕಾ ಪಾಟೀಲ ಮಾತನಾಡಿ, ರೈತರು ಸಂಕಷ್ಟಕ್ಕೆ ಸಿಲುಕಿದ್ದು ಹಿಂದೆ ಭಿತ್ತನೆ ಮಾಡಿದ ಬೆಳೆಗಳು ಮಳೆ ಇಲ್ಲದೆ ನಿಂತಿವೆ. ಇದರಿಂದ ಭಿತ್ತಿದ ಕೃಷಿ ವೆಚ್ಚವನ್ನು ಸಹ ಮರಳಿ ಪಡೆಯಲು ಸಾಧ್ಯವಾಗದಂತಾಗಿದೆ ಆದ್ದರಿಂದ ತಹಶೀಲ್ದಾರ ಸರ್ಕಾರಕ್ಕೆ ವರದಿ ಸಲ್ಲಿಸಿ ಸಂಪೂರ್ಣ ಸಾಲ ಮನ್ನಾ ಮಾಡಬೇಕು ಹಾಗೂ ಸಾಲ ವಸೂಲಾತಿ ರದ್ದುಗೊಳಿಸಬೇಕು ಎಂದು ಆಗ್ರಹಿಸಿದರು.

ರಾಷ್ಟ್ರೀಯ ರೈತರ ಸಂಘದ ತಾಲ್ಲೂಕು ಅಧ್ಯಕ್ಷ ಶಿವಪ್ಪ ಡೋಣೂರ, ಜಿಲ್ಲಾ ಉಪಾಧ್ಯಕ್ಷ ಸಂಪತ್ ಜಮಾದಾರ ಮಾತನಾಡಿ ಮನವಿ ಸಲ್ಲಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಶಿರಸ್ತೇದಾರ, ತಾಲ್ಲೂಕಿನ ಮಳೆ, ಬೆಳೆಗಳ ವಾಸ್ತವಿಕ ವರದಿ ಹಾಗೂ ನಿಮ್ಮ ಮನವಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದರು.

ತಾಲ್ಲೂಕು ಯುವಮೋರ್ಚಾ ಅಧ್ಯಕ್ಷ ಸಂಗಮೇಶ ಹುಣಸಗಿ, ಮಹಿಳಾ ಘಟಕದ ಅಧ್ಯಕ್ಷೆ ಗುರಮ್ಮ ಹಿರೇಮಠ, ಸಾಹೇಬಗೌಡ ಪಾಟೀಲ, ದ್ಯಾವಪ್ಪಗೌಡ ಪಾಟೀಲ, ಅಮೀನಪ್ಪಗೌಡ ಪಾಟೀಲ, ಬಾಬಾಗೌಡ ಪಾಟೀಲ, ರುದ್ರಯ್ಯ ಹಿರೇಮಠ, ಕಲ್ಲಯ್ಯ ಮಠಪತಿ, ವಿಠ್ಠಲ ಯಾತಗಿರಿ, ರಾಮಣ್ಣ ನಾಯ್ಕೋಡಿ, ಅಕ್ಬರ್ ಅರಬ್, ಗಣೇಶ ಕನ್ನೊಳ್ಳಿ, ಅಡಿವೆಪ್ಪ ಬನ್ನಿಕಟ್ಟಿ, ರಾಜಶೇಖರ ಯಾತಗಿರಿ, ಅಲ್ಲಾಭಕ್ಷ ಭೈರವಾಡಗಿ, ಧರೆಪ್ಪ ಮನಗೂಳಿ, ಆನಂದ ಬನ್ನಿಕಟ್ಟಿ, ಮಾಂತೇಶ ಹಿರ್ಲಾಕುಂಡ, ಅಪ್ಪಾಸಾಬ್ ಹರವಾಳ, ಸೋಮರಾಯ ಇದ್ದರು.

## ಕಾಲುವೆಗೆ ನೀರು ಹರಿಸಲು ರೈತರ ಆಗ್ರಹ | ಅಖಂಡ ಕರ್ನಾಟಕ ರೈತ ಸಂಘದ ಕಾರ್ಯಕರ್ತರಿಂದ ಮೂರು ದಿನದ ಗಡುವು

# ಕೃಷ್ಣೆಗೆ ಇಳಿದು ರೈತರ ವಿನೂತನ ಪ್ರತಿಭಟನೆ



■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ಕೃಷ್ಣಾ ಅಚ್ಚುಕಟ್ಟು ಪ್ರದೇಶದ ಕಾಲುವೆಗೆ ನೀರು ಹರಿಸಬೇಕೆಂದು ಆಗ್ರಹಿಸಿ ಅಖಂಡ ಕರ್ನಾಟಕ ರೈತ ಸಂಘದ ಕಾರ್ಯಕರ್ತರು ಸೋಮವಾರ ಕೃಷ್ಣಾ ನದಿಯ ಹಿನ್ನೀರಿಗೆ ಇಳಿದು 2 ಗಂಟೆಗಳ ಕಾಲ ನೀರಿನಲ್ಲೇ ಪ್ರತಿಭಟಿಸಿದರು.

ಚಂದ್ರಮ್ಮಾ ದೇವಸ್ಥಾನದ ಬಳಿ ಆರಂಭವಾದ ಪ್ರತಿಭಟನೆಯಲ್ಲಿ ಕಾರ್ಯಕರ್ತರು ಹಲಗೆ ವಾದನದೊಂದಿಗೆ ರಾಮಲಿಂಗೇಶ್ವರ ದೇವಸ್ಥಾನದಿಂದ ಕೆಬಿಜೆಎನ್‌ಎಲ್ ಮುಖ್ಯ ಎಂಜಿನಿಯರ್ ಕಚೇರಿವರೆಗೆ ಮೆರವಣಿಗೆ ನಡೆಸಿ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

"ಮುಂಗಾರು ಮಳೆ ಕೈಕೊಟ್ಟಿದೆ. ನೀರು ಬರುತ್ತದೆ ಎಂಬ ನಂಬಿಕೆಯಲ್ಲಿ ರೈತರು ಬೆಳೆ ಬೆಳೆದಿದ್ದಾರೆ. ಐಅಅ ರಚನೆಯಾಗಿಲ್ಲ ಎಂಬ ಸಬೂಬು ಹೇಳಿ ನೀರು ಬಿಡದಿರುವುದು ಸರಿಯಲ್ಲ. ತಕ್ಷಣ ಕಾಲುವೆಗೆ ನೀರು ಹರಿಸಬೇಕು, ಕೆರೆಗಳನ್ನು ಭರ್ತಿ ಮಾಡಬೇಕು" ಎಂದು ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಆಗ್ರಹಿಸಿದರು.

"ತುಬಚಿ–ಬಬಲೇಶ್ವರ ಏತಕ್ಕೆ ನೀರು ಬಿಡಲಾಗಿದೆ. ಆದರೆ ಆಲಮಟ್ಟಿ ಕಾಲುವೆಗೆ ಮಾತ್ರ ನೀರಿಲ್ಲ. 3 ದಿನಗಳಲ್ಲಿ ನೀರು ಬಿಡದಿದ್ದರೆ ಅಮರಣ ಉಪವಾಸ ಸತ್ಯಾಗ್ರಹ ಮಾಡುತ್ತೇವೆ" ಎಂದು ಎಚ್ಚರಿಕೆ ನೀಡಿದರು.

ನಂತರ ಸರ್ಕಾರದ ಮೇಲೆ ಒತ್ತಡ ಹೇರಲು ಕಾರ್ಯಕರ್ತರು ನೇರವಾಗಿ ಕೃಷ್ಣಾ ನದಿಗೆ ಇಳಿದರು. ಗಾಳಿ, ಚಳಿ, ನೀರಿನ ರಭಸದ ನಡುವೆಯೂ ಅವರು ನೀರಿನಲ್ಲೇ ನಿಂತು ಪ್ರತಿಭಟಿಸಿದರು. ಪೊಲೀಸರ ಮನವಿಗೆ ಮಣಿಯದ ರೈತರನ್ನು ನಿಡಗುಂದಿ ಸಿಪಿಐ ಶರಣಗೌಡ ಪಾಟೀಲ ಮನವೊಲಿಸಿ ಹೊರಗೆ ಕರೆತಂದರು.

ಈ ವೇಳೆ ಸೀತಪ್ಪ ಗಣಿ, ರವಿ ಕೋತಿನ, ವಿಠ್ಠಲ ಬಿರಾದಾರ, ಉಮೇಶ ವಾಲೀಕಾರ, ಸಿದ್ದು ಹಿರೇಮಠ ಸೇರಿದಂತೆ ಹಲವರು ಇದ್ದರು.

**ರಾಜ್ಯ ರೈತ ಸಂಘದಿಂದ ಕಚೇರಿಗೆ ಬೀಗ**

**ಇದೇ ಬೇಡಿಕೆಗಾಗಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ಮುಖ್ಯ ಎಂಜಿನಿಯರ್ ಕಚೇರಿಗೆ ಬೀಗ ಜಡಿದು ದಿಗ್ಬಂಧನ ನಡೆಸಿದರು. ಅರೆಬೆತ್ತಲೆಯಾಗಿ ಮಲಗಿ ಪ್ರತಿಭಟಿಸಿದರು.**

**ಅಧ್ಯಕ್ಷ ತಿರುಪತಿ ಬಂಡಿವಡ್ಡರ ಮಾತನಾಡಿ, "ನೀರು ಹರಿಸದಿದ್ದರೆ ಉಗ್ರ ಹೋರಾಟ ಅನಿವಾರ್ಯ" ಎಂದು ತಿಳಿಸಿದರು.**

**ಅಧೀಕ್ಷಕ ಎಂಜಿನಿಯರ್ ಬಿ.ಎಸ್. ಪಾಟೀಲ ಮನವಿ ಸ್ವೀಕರಿಸಿ, "ಜುಲೈ 14ರಂದು ಬೆಳಗಾವಿ ಪ್ರಾದೇಶಿಕ ಆಯುಕ್ತರ ನೇತೃತ್ವದಲ್ಲಿ ಡಿಸಿ, ಕೆಬಿಜೆ–ಎನ್‌ಎಲ್ ಅಧಿಕಾರಿಗಳ ಸಭೆ ಇದೆ. ಅದರಲ್ಲಿ ನೀರು ಹರಿಸುವ ಬಗ್ಗೆ ತೀರ್ಮಾನವಾಗುತ್ತದೆ" ಎಂದು ಭರವಸೆ ನೀಡಿದರು.**

**ಗುರುಸಂಗಪ್ಪಗೌಡ ಹಂಡರಗಲ್ಲ, ಅಯ್ಯಪ್ಪ ಬಿದರಕುಂದಿ, ವೈ.ಎಲ್. ಬಿರಾದಾರ, ಶಿವಪ್ಪ ಬೇವಿನಮಟ್ಟಿ, ಲಕ್ಷ್ಮಣ ಚಳ್ಳಮರದ ಸೇರಿದಂತೆ ಹಲವರು ಭಾಗವಹಿಸಿದ್ದರು.**



**ಕಲಬುರಗಿ: ನಾರಾಯಣಪುರ ರಾಜ್ಯ ಹೆದ್ದಾರಿ ( ಎನ್‌ಎಚ್ 155)ಪಟ್ಟಣ ಕ್ರಾಸ್‌ದಿಂದ 5.50 ಕಿಮೀವರೆಗಿನ ರಸ್ತೆ ಕಾಮಗಾರಿಯ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮಕ್ಕೆ ಆಗ್ರಹಿಸಿ ಇಂದು ಕಲ್ಯಾಣ ಕರ್ನಾಟಕ ರಕ್ಷಣಾ ವೇದಿಕೆಯಿಂದ ಲೋಕೋಪಯೋಗಿ ಇಲಾಖೆ ಅಧೀಕ್ಷಕ ಅಭಿಯಂತರರ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಯಿತು. ರಾಜ್ಯಾಧ್ಯಕ್ಷ ಶಿವಲಿಂಗ ಹಳಿಮನಿ,ಜಿಲ್ಲಾಧ್ಯಕ್ಷ ಸಂದೀಪ ಭರಣಿ ,ಅಂಬರೀಶ,ವಿಶ್ವನಾಥ ಅವರು ಸೇರಿದಂತೆ ಹಲವರು ಪಾಲ್ಗೊಂಡರು .**

## ಯುವ ಜನ ಸೇನೆ ರಾಜ್ಯಾಧ್ಯಕ್ಷ ಶಿವಾನಂದ ವಾಲಿ ತೀವ್ರ ಆಕ್ರೋಶ

# ಐದಾರು ತಿಂಗಳಿಂದ ಸಾಮಾನ್ಯ ಸಭೆ ಮಾಡದ ನಾಲತವಾಡ ಪಪಂ

■ ಉದಯರಶ್ಮಿ ದಿನಪತ್ರಿಕೆ




ಮುದ್ದೇಬಿಹಾಳ: ಕಳೆದ ಐದಾರು ತಿಂಗಳಿಂದ ಪಟ್ಟಣ ಪಂಚಾಯತಿಯ ಸಾಮಾನ್ಯ ಸಭೆಯನ್ನೇ ನಡೆಸದೆ ಆಡಳಿತ ಮಂಡಳಿ ಜನಪ್ರತಿನಿಧಿಗಳ ಜವಾಬ್ದಾರಿಯನ್ನು ಮರೆತಿದೆ ಎಂದು ಯುವ ಜನ ಸೇನೆ ರಾಜ್ಯಾಧ್ಯಕ್ಷ ಶಿವಾನಂದ ವಾಲಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪಟ್ಟಣದಲ್ಲಿ ರಸ್ತೆ, ಕುಡಿಯುವ ನೀರು, ಚರಂಡಿ, ಸ್ವಚ್ಛತೆ, ಬೀದಿದೀಪ ಸೇರಿದಂತೆ ಜನರನ್ನು ಕಾಡುತ್ತಿರುವ ನೂರಾರು ಸಮಸ್ಯೆಗಳಿದ್ದರೂ, ಅವುಗಳ ಬಗ್ಗೆ ಚರ್ಚಿಸಿ ನಿರ್ಣಯ ಕೈಗೊಳ್ಳಬೇಕಾದ ಸಾಮಾನ್ಯ ಸಭೆಯನ್ನೇ ತಿಂಗಳುಗಟ್ಟಲೆ ನಡೆಸದಿರುವುದು ಆಡಳಿತದ ಸಂಪೂರ್ಣ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ಆರೋಪಿಸಿದರು.

ಜನರು ಅಭಿವೃದ್ಧಿಗಾಗಿ ಮತ ಹಾಕಿದ್ದಾರೆ ಹೊರತು ಮೌನ ಆಡಳಿತಕ್ಕಾಗಿ ಅಲ್ಲ. ಸಮಸ್ಯೆಗಳ ಪರಿಹಾರಕ್ಕಾಗಿ ಸಭೆ ನಡೆಸುವುದೇ ಜನಪ್ರತಿನಿಧಿಗಳ ಮೊದಲ ಕರ್ತವ್ಯ. ಆದರೆ ಐದಾರು ತಿಂಗಳಿಂದ ಸಭೆಯೇ ನಡೆಸದಿರುವುದು ಜನರ ವಿಶ್ವಾಸಕ್ಕೆ ಮಾಡಿದ ದ್ರೋಹವಾಗಿದೆ ಎಂದು ಕಿಡಿಕಾರಿದರು.

ಪಟ್ಟಣದ ಹಲವು ವಾರ್ಡ್ಗಳಲ್ಲಿ ರಸ್ತೆ ಹದಗೆಟ್ಟಿವೆ, ಚರಂಡಿಗಳು ಕೊಳಚೆಯಿಂದ ತುಂಬಿವೆ, ಕುಡಿಯುವ ನೀರಿನ ಸಮಸ್ಯೆ ಬಿಗಡಾಯಿಸಿದೆ, ಸ್ವಚ್ಛತಾ ಕಾರ್ಯ ಸಮರ್ಪಕವಾಗಿಲ್ಲ. ಸಾರ್ವಜನಿಕರು ಪದೇ ಪದೇ ದೂರು ನೀಡುತ್ತಿದ್ದರೂ ಅವುಗಳ ಬಗ್ಗೆ ಚರ್ಚಿಸಲು ಆಡಳಿತ ಮಂಡಳಿಗೆ ಸಮಯ ಸಿಗದಿರುವುದು ಆಶ್ಚರ್ಯಕರ ಸಂಗತಿಯಾಗಿದೆ ಎಂದರು.

ಐದಾರು ತಿಂಗಳಿಂದ ಸಾಮಾನ್ಯ ಸಭೆ ನಡೆಸದಿರುವುದರ ಹಿಂದಿನ ಉದ್ದೇಶವೇನು? ಅಧ್ಯಕ್ಷ–ರಿಗೆ ಸಮಯ ಸಿಗಲಿಲ್ಲವೇ? ಅಥವಾ ಸಾರ್ವಜನಿಕರಿಗೆ ತಿಳಿಯಬಾರದ ವಿಷಯಗಳನ್ನು ಮುಚ್ಚಿಡುವ ಪ್ರಯತ್ನ ನಡೆಯುತ್ತಿದೆಯೇ? ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಹಾಗೂ ಅನುದಾನದ ಬಳಕೆ ಕುರಿತು ಸದಸ್ಯರ ಮುಂದೆ ಚರ್ಚಿಸಲು ಹಿಂದೇಟು ಹಾಕುತ್ತಿರುವುದೇಕೆ? ಎಂದು ಅವರು ಪ್ರಶ್ನಿಸಿದರು.

ಸಾಮಾನ್ಯ ಸಭೆಯು ಕೇವಲ ಔಪಚಾರಿಕ ಸಭೆಯಲ್ಲ. ಪಟ್ಟಣದ ಅಭಿವೃದ್ಧಿ ಯೋಜನೆಗಳು, ಸಾರ್ವಜನಿಕರ ಸಮಸ್ಯೆಗಳು, ವಿವಿಧ ಕಾಮಗಾರಿಗಳ ಪ್ರಗತಿ, ಅನುದಾನದ ಬಳಕೆ ಹಾಗೂ ಆಡಳಿತಾತ್ಮಕ ನಿರ್ಣಯಗಳ ಬಗ್ಗೆ ಚರ್ಚಿಸಿ ತೀರ್ಮಾನ ಕೈಗೊಳ್ಳುವ ಪ್ರಮುಖ ವೇದಿಕೆಯಾಗಿದೆ. ಅಂತಹ ಸಭೆಯನ್ನೇ ನಿರಂತರವಾಗಿ ನಡೆಸದೇ ಇರುವುದು ಆಡಳಿತದ ನಿರ್ಲಕ್ಷ್ಯವನ್ನು ಬಯಲಿಗೆಳೆಯುತ್ತದೆ ಎಂದು ಆರೋಪಿಸಿದರು.

ಪಟ್ಟಣದ ಜನರು ದಿನನಿತ್ಯ ಮೂಲಭೂತ ಸೌಲಭ್ಯಗಳಿಗಾಗಿ ಪರದಾಡುತ್ತಿರುವ ಸಂದರ್ಭದಲ್ಲಿ ಆಡಳಿತ ಮಂಡಳಿ ಮೌನ ವಹಿಸಿರುವುದು ಖಂಡನೀಯ. ಜನರ ಸಮಸ್ಯೆಗಳಿಗೆ ಸ್ಪಂದಿಸದ ಆಡಳಿತವನ್ನು ಜನರು ಸಹಿಸುವುದಿಲ್ಲ ಎಂದು ಎಚ್ಚರಿಸಿದ ಅವರು, ಕೂಡಲೇ ಸಾಮಾನ್ಯ ಸಭೆ ಕರೆದು ನೆನೆಗುದಿಗೆ ಬಿದ್ದಿರುವ ಕಾಮಗಾರಿಗಳು ಹಾಗೂ ಸಾರ್ವಜನಿಕ ಸಮಸ್ಯೆಗಳ ಕುರಿತು ಚರ್ಚಿಸಿ ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಇನ್ನೂ ವಿಳಂಬ ಮಾಡಿದರೆ ಯುವ ಜನ ಸೇನೆ ನೇತೃತ್ವದಲ್ಲಿ ಸಾರ್ವಜನಿಕರನ್ನು ಸಂಘಟಿಸಿ ಪಟ್ಟಣ ಪಂಚಾಯತಿ ಎದುರು ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು. ಜನರ ಹಕ್ಕುಗಳಿಗಾಗಿ ಯಾವುದೇ ಹಂತದ ಹೋರಾಟಕ್ಕೂ ನಾವು ಸಿದ್ಧ ಎಂದು ಎಚ್ಚರಿಕೆ ನೀಡಿದ್ದಾರೆ.

# ಆಷಾಢ ಏಕಾದಶಿ ದಿಂಡಿಯಾತ್ರೆ, ಪಂಢರಾಪುರಕ್ಕೆ ಪಾದಯಾತ್ರೆ

■ ಉದಯರಶ್ಮಿ ದಿನಪತ್ರಿಕೆ



ದೇವರ ಹಿಪ್ಪರಗಿ: ಸತತ 21 ವರ್ಷಗಳಿಂದ ಪಾದಯಾತ್ರೆಯ ಮೂಲಕ ಯಾತ್ರೆ ಕೈಗೊಂಡಿರುವ ಬಳ್ಳಾರಿ ಜಿಲ್ಲೆಯ ಕುರುಗೋಡು ತಾಲ್ಲೂಕಿನ ಏಳಬೆಂಚಿ ಗ್ರಾಮದ ಭಕ್ತಾಧಿಗಳು ಪಟ್ಟಣದ ಭಕ್ತರ ಊಟೋಪಚಾರದ ಸೇವೆಯ ನಂತರ ಪಂಢರಾಪುರಕ್ಕೆ ಪಾದಯಾತ್ರೆ ಬೆಳೆಸಿದರು. ಸೋಮವಾರ ಪಟ್ಟಣ–ಕ್ಕೆ ಆಗಮಿಸಿದ ಅರವತ್ತಕ್ಕೂ ಹೆಚ್ಚು ಯಾತ್ರಾರ್ಥಿಗಳು ಆದಿಗುರು ಜಿ. ಪಾಂಡುರಂಗ ಸ್ವಾಮಿ, ಪಂಪಣ್ಣಸ್ವಾಮಿ ನೇತೃತ್ವದಲ್ಲಿ ಕೀರ್ತನೆ, ಭಜನೆಗಳನ್ನು ನೆರವೇ–ರಿಸಿದರು. ಈ ಸಂದರ್ಭದಲ್ಲಿ ಪಟ್ಟಣದ ಮಡಿವಾಳಪ್ಪ ಕುಂಬಾರ ಯಾತ್ರಾರ್ಥಿಗಳಿಗೆ ಮಧ್ಯಾಹ್ನದ ಊಟದ ವ್ಯವಸ್ಥೆ ಕಲ್ಪಿಸಿದರು.

ಪ್ರತಿ ವರ್ಷದ ಪಾದಯಾತ್ರೆ ಸಮಯಕ್ಕೆ ಪಟ್ಟಣದ ಜನತೆ ನೀಡುತ್ತಿರುವ ಸಹಕಾರ ಕುರಿತು ಪಾದಯಾತ್ರೆ ಸಮಿತಿಯ ಮುಖ್ಯಸ್ಥ ಕೆ.ಬ್ಯಾಳಿಪಂಪಣ್ಣ ಮಾತನಾಡಿ, ಇದೇ ಜುಲೈ 5 ಭಾನುವಾರದಿಂದ ಬಳ್ಳಾರಿ ಜಿಲ್ಲೆಯ ಏಳಬೆಂಚಿ ಆರಂಭಗೊಂಡ ಈ ಯಾತ್ರೆಯಲ್ಲಿ ಮಹಿಳೆಯರು ಸೇರಿ ಅರವತ್ತಕ್ಕೂ ಹೆಚ್ಚು ಜನರಿದ್ದು, ಸತತವಾಗಿ 13 ದಿನಗಳ ಕಾಲುನಡಿಗೆಯಲ್ಲಿ ಸಾಗಿ ದಿ:18 ಶನಿವಾರದಂದು ಆಷಾಢ ಏಕಾದಶಿಯಂದು ಪಂಢರಾಪುರ ತಲುಪುತ್ತದೆ. ನಂತರ ಎಲ್ಲ ಪಾದಯಾತ್ರಿಗಳು ತಮ್ಮ ತಮ್ಮ ಗ್ರಾಮಕ್ಕೆ ತೆರಳಲಿದ್ದಾರೆ ಎಂದರು. ಯಾತ್ರೆಯ ನೇತೃತ್ವವನ್ನು ಷಡಕ್ಷರಿ, ಕೆ.ಪಂಪಣ್ಣ, ಎ.ತುಕಾರಾಮಪ್ಪ, ರ್‍ರಿಸ್ವಾಮಿ, ಸಣ್ಣಜಂಬುನಾಥ, ಶ್ರೀನಿವಾಸ, ಸಾಹುಕಾರ ಚಂದ್ರಶೇಖರ, ಹೊಟ್ಟೆ ಶರಣಬಸವ ಡಿ.ಸುರೇಶ, ನೀಲಮ್ಮ, ಹಣಮಂತಮ್ಮ, ಕರೆಮ್ಮ, ಯಲ್ಲಮ್ಮ, ತುಳಸಿ ಗಂಗಮ್ಮ, ವೀಣಾಕಾರ ಕೆ.ಹೊನ್ನೂರಸ್ವಾಮಿ, ರಾಮಪ್ಪ, ಶರಣಪ್ಪ, ಈ.ತಿಮ್ಮಪ್ಪ ವಹಿಸಿದ್ದರು.

# ಯುವಜನತೆಗೆ ಭವಿಷ್ಯದ ಆಧಾರವೇ ಕೌಶಲ್ಯಗಳು

■ ಉದಯರಶ್ಮಿ ದಿನಪತ್ರಿಕೆ



**ಇಂದು (ಜುಲೈ 15, ಬುಧವಾರ) "ವಿಶ್ವ ಯುವ ಕೌಶಲ್ಯ ದಿನ" ದ ತನಿಮಿತ್ಯ ಈ ವಿಶೇಷ ಲೇಖನ**


ಆಧುನಿಕ ಮಾನವ ಕಂಪ್ಯುಟರ್ ಎಂದೇ ಹೆಸರುವಾಸಿಯಾದ ಶಕುಂತಲಾ ದೇವಿ ಪ್ರಕಾರ" ಶಿಕ್ಷಣವೆಂದರೆ ಕೇವಲ ಶಾಲೆ–ಕಾಲೇಜುಗಳಿಂದ ಪದವಿ ಪಡೆಯುವುದಲ್ಲ. ಅದು ವ್ಯಕ್ತಿಯ ವಿಷಯ ಜ್ಞಾನ, ಪ್ರಾಯೋಗಿಕತೆ, ವಿವೇಚನೆ–ತಾರ್ಕಿಕ ಶಕ್ತಿಯನ್ನು ಹೆಚ್ಚಿಸುತ್ತಾ, ಹಂಚಿಕೆಯಾದ ಕಾರ್ಯವನ್ನು ಕಾರ್ಯಕ್ಷಮತೆಯೊಂದಿಗೆ ಪೂರ್ಣಗೊಳಿಸಲು ಬೇಕಾದ ಅಗತ್ಯ ಕೌಶಲ್ಯವನ್ನು ಒಡಮೂಡಿಸುವುದೇ ನಿಜವಾದ ಶಿಕ್ಷಣ" ಎಂದು ಅಭಿಪ್ರಾಯಪಟ್ಟಿದ್ದಾರೆ. ಜಾಗತಿಕ ಕಾರ್ಪೋರೇಟ್ ಸಂಸ್ಥೆಗಳ ಇತ್ತೀಚಿನ ಅಧ್ಯಯನ ವರದಿಯ ಪ್ರಕಾರ, ಇಂದು ಕಾಲೇಜುಗಳಿಂದ ಪದವಿ ಪಡೆದು ಹೊರಬರುವ ವಿದ್ಯಾರ್ಥಿಗಳು ಅಥವಾ ಪದವೀಧರರು ಉದ್ಯೋಗಕ್ಕೆ ತಕ್ಕಂತೆ ಅರ್ಹತೆ, ಸಂವಹನ ಕೌಶಲ್ಯ, ಸಂದರ್ಶನ ಕಲೆ ಮತ್ತು ಕ್ರಿಯಾಶೀಲತೆ ಮತ್ತು ಸೃಜನಾತ್ಮಕತೆಯನ್ನು ಹೊಂದಿರುವುದಿಲ್ಲ. ಇಂದಿನ ಕಾಲದಲ್ಲಿ ಡಿಗ್ರಿಗಳಿಗೆ ಕಾಲವಿಲ್ಲ, ಅದರ ಜೊತೆಗೆ ಕೌಶಲ್ಯಗಳನ್ನು ಪಡೆದವನು ಉದ್ಯೋಗದಲ್ಲಿ ಉನ್ನತ ದರ್ಜೆಗೆ ಶೀಘ್ರವಾಗಿ ಏರಲು ಸಾಧ್ಯವಾಗುತ್ತದೆ ಎಂಬ ಅಂಶ ಕಂಡುಬಂದಿದೆ.

ಯುವಕರನ್ನು ಕೌಶಲ್ಯದೊಂದಿಗೆ ಸಜ್ಜುಗೊಳಿಸಿ ಉದ್ಯೋಗವಂತರನ್ನಾಗಿಸುವ ಮಹತ್ವಾಕಾಂಕ್ಷೆ



ಜಾಗತಿಕವಾಗಿ ಯುವಜನತೆ ಎದು–ರಿಸುವ ಅತಿ ಪ್ರಮುಖ ಸಮಸ್ಯೆಗಳೊಂದಾದ ನಿರುದ್ಯೋಗ ಮತ್ತು ಉದ್ಯೋಗಕ್ಕೆ ಬೇಕಾದ ಕೌಶಲ್ಯಗಳ ಅವರಲ್ಲಿ ಒಡಮೂಡಿಸುವಲ್ಲಿ ಅಗತ್ಯ ತರಬೇತಿ ಮತ್ತು ಕೌಶಲ್ಯಾಧಾರಿತ ಶಿಕ್ಷಣ ನೀಡುವ ಮಹತ್ವಾಕಾಂಕ್ಷೆಯೊಂದಿಗೆ ವಿಶ್ವಸಂಸ್ಥೆಯು ಜುಲೈ 15, 2014 ರಂದು ವಿಶ್ವ ಯುವ ಕೌಶಲ್ಯ ದಿನವನ್ನು ಆಚ–'ರಿಸಲು ಅಧಿಕೃತವಾಗಿ ಕರೆಕೊಟ್ಟಿತು. ಯುವಜನರಲ್ಲಿ ತಾಂತ್ರಿಕ ಮತ್ತು ವೃತ್ತಿಪರ ಕೌಶಲ್ಯಗಳನ್ನು ಬೆಳೆಸುವುದರ ಮೂಲಕ ನಿರುದ್ಯೋಗ ಸಮಸ್ಯೆಯನ್ನು ಕಡಿಮೆ ಮಾಡುವುದು ಮತ್ತು ಯುವಶಕ್ತಿಯನ್ನು ಉದ್ಯೋಗಕ್ಕಾಗಿ ಸಬಲೀಕರಣಗೊಳಿಸುವುದು ಈ 'ವಿಶ್ವ ಯುವ ಕೌಶಲ್ಯ ದಿನ'ದ ಪ್ರಮುಖ ಧ್ಯೇಯೋದ್ದೇಶವಾಗಿದೆ. ಕಾರ್ಪೋರೇಟ್ ಜಗತ್ತು ಅಪೇಕ್ಷಿತವಾದ ಕೌಶಲ್ಯವಿದ್ದರೆ ಉದ್ಯೋಗ ನಮ್ಮದಾಗುತ್ತದೆ ಬದಲಾಗುತ್ತಿರುವ ವಿಜ್ಞಾನ–ತಂತ್ರಜ್ಞಾನದ ಯುಗದಲ್ಲಿ ಯುವಜನತೆಗೆ ಉದ್ಯೋಗ ಪಡೆಯುವುದು ಒಂದು ಸವಾಲಾಗಿ ಪರಿಣಮಿಸಿದೆ. ಅದಕ್ಕಾಗಿ ಉದ್ಯೋಗಾಕಾಂಕ್ಷಿಗಳು ಉನ್ನತ ಗುಣಮಟ್ಟದ ಶಿಕ್ಷಣದ ಜತೆ ವೃತ್ತಿಪರತೆಯೊಂದಿಗೆ ಸಂದರ್ಶನ ಕಲೆ, ಸಂವಹನ ಕೌಶಲ್ಯ, ವಿಶ್ಲೇಷಣೆ, ತಾರ್ಕಿಕ ಶಕ್ತಿ ಮತ್ತು ಸೃಜನಾತ್ಮಕತೆಯಂತಹ ಕೌಶಲ್ಯಗಳನ್ನು ಹೊಂದಬೇಕಾಗಿರುವುದು ಇಂದಿನ ಅಗತ್ಯತೆಯಾಗಿದೆ. ಯಾವ ಕ್ಷೇತ್ರದಲ್ಲಿ ಉದ್ಯೋಗ ಅರಸುತ್ತಿರುವಿರೋ ಆ ಕ್ಷೇತ್ರದಲ್ಲಿ ಅಗತ್ಯ ಶೈಕ್ಷಣಿಕ ಅರ್ಹತೆಗಳು ಮತ್ತು ಕಾರ್ಪೋರೇಟ್ ಜಗತ್ತಿನ ಅಪೇಕ್ಷಿತ ಮಟ್ಟದ ಕೌಶಲ್ಯವನ್ನು ಪಡೆದಿರಬೇಕು. ಅಂ–ದಾಗ ಮಾತ್ರ ದೊರೆಯುವ ಉದ್ಯೋಗಾವಕಾಶಗಳನ್ನು ಬಾಚಿಕೊಳ್ಳಲು ಸಹಕಾರಿಯಾಗುತ್ತದೆ. ಯುವಜನತೆ ಸ್ವಾವಲಂಬಿಯಾಗುವಂತೆ ಸರ್ಕಾರದ ದಿಟ್ಟ ಹೆಜ್ಜೆ

ಈ ನಿಟ್ಟಿನಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಕೌಶಲ್ಯಾಭಿವೃದ್ಧಿಗಾಗಿ ಅನೇಕ ಕಾರ್ಯಕ್ರಮ ಮತ್ತು ಯೋಜನೆಗಳನ್ನು ರೂಪಿಸಿವೆ. ಮೈ ಭಾರತ, ಡಿಜಿಟಲ್ ಇಂಡಿಯಾ, ಸ್ಕಿಲ್ ಇಂಡಿಯಾ, ಸ್ಟಾರ್ಟ



ಅಪ್, ಸ್ಟಾಂಡ್ ಅಪ್, ಮೇಕ್ ಇನ್ ಇಂಡಿಂ–ಯಾ, ಮೇಕ್ ಫಾರ್ ಇಂಡಿಯಾ, ಮುದ್ರಾ ಹೀಗೆ ಯುವಕರಲ್ಲಿ ಕೌಶಲ್ಯಾಭಿವೃದ್ಧಿ, ಸ್ವಯಂ ಉದ್ಯೋಗ ಮತ್ತು ಜೀವನೋಪಾಯಕ್ಕಾಗಿ ಕೌಶಲ್ಯಾಧಾರಿತ ತರಬೇತಿ ನೀಡುತ್ತಿರುವುದು ದಿಟ್ಟ ಹೆಜ್ಜೆಯಾಗಿದೆ. ಕಂಪ್ಯೂಟರ್ ಪ್ರೋಗ್ರಾಮ್ಮಿಂಗ್, ಯಂತ್ರಗಳ ಬಳಕೆ, ಹಾರ್ಡವೇರ್–ಸಾಫ್ಟವೇರ, ಟೇಲರಿಂಗ್, ಬ್ಯೂಟಿ ಪಾರ್ಲರ್, ಕರಕುಶಲ ಕೆಲಸ–ಕಾರ್ಯಗಳ ಬಗ್ಗೆ ತರಬೇತಿ ನೀಡುತ್ತಾ, ಸ್ವಯಂ ಉದ್ಯೋಗದೊಂದಿಗೆ ಆರ್ಥಿಕ ಸ್ವಾವಲಂಬಿಯನ್ನಾಗಿಸುತ್ತಿದೆ. ಯುವಜನತೆಯಲ್ಲಿ ವೃತ್ತಿ, ಜೀವನ ಕೌಶಲ್ಯ, ಉದ್ಯಮ ಹೀಗೆ ವಿವಿಧ ಕ್ಷೇತ್ರಗಳಲ್ಲಿ ಅಗತ್ಯವಾದ ಕೌಶಲ್ಯಗಳನ್ನು ಮೈಗೂಡಿಸಿಕೊಳ್ಳುವಂತೆ ಮತ್ತು ಕೌಶಲ್ಯಗಳ ಸದ್ಬಳಕೆ ಮಾಡಿಕೊಳ್ಳುವಂತೆ ಪ್ರೇರೇಪಿಸುವುದೇ ಈ ದಿನದ ಆಚರಣೆಯು ಪ್ರಮುಖ ಪಾತ್ರ ವಹಿಸುತ್ತಿದೆ.

ಶಿಕ್ಷಣದ ಗುರಿ ಮತ್ತು ದೃಷ್ಟಿಕೋನ ಬದಲಾಗಬೇಕು

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಯುವಕರಿಗೆ ಕೇವಲ ಶೈಕ್ಷಣಿಕ ಜ್ಞಾನವಷ್ಟೇ ಸಾಲದು. ಅವರವರ ಕ್ಷೇತ್ರದಲ್ಲಿ ಅಥವಾ ಆಸಕ್ತಿಗೆ ತಕ್ಕಂತೆ ವೃತ್ತಿಪರ ಮತ್ತು ತಾಂತ್ರಿಕ ಕೌಶಲ್ಯಗಳನ್ನು ಬೆಳೆಸಿಕೊಳ್ಳುವುದು ಅತ್ಯಗತ್ಯವಾಗಿರುತ್ತದೆ. ಉದ್ಯೋಗ ಪಡೆಯಲು ಅಭ್ಯರ್ಥಿಗಳ ಕೌಶಲ್ಯಗಳೇ ಮಾನದಂಡವಾಗಲಿವೆ.ಉನ್ನತಶಿಕ್ಷಣದಲ್ಲಿವಿದ್ಯಾರ್ಥಿಗಳು ಪಡೆದ ಪಠ್ಯಕ್ರಮದಲ್ಲಿರುವ ವಿಷಯ ಜ್ಞಾನವು ಅವರು




ಉದ್ಯೋಗ ಸ್ಥಳಕ್ಕೆ ಬಂದಾಗ ಅದು ಹಳೆಯದಾಗಿರುತ್ತದೆ. ಆದ್ದರಿಂದ ಉನ್ನತ ಶಿಕ್ಷಣದ ಪಠ್ಯಕ್ರಮದಲ್ಲಿ ಪ್ರಸ್ತುತ ಕೈಗಾರಿಕೆ, ಕಂಪನಿ, ವ್ಯವಹಾರ ಸಂಸ್ಥೆಗಳು, ಬ್ಯಾಂಕಿಂಗ್, ಹಣಕಾಸು, ವಿಮೆ ಮತ್ತು ಇನ್ನಿತರ ಸೇವಾ ಸಂಸ್ಥೆಗಳ ಅಗತ್ಯತೆಗೆ ಅನುಗುಣವಾಗಿ ಶೈಕ್ಷಣಿಕ ಮತ್ತು ಕೈಗಾ–ರಿಕಾ ಸಂಸ್ಥೆಗಳ ನಡುವೆ ಸಂಪರ್ಕವನ್ನಿಟ್ಟುಕೊಂಡು ಆಗುತ್ತಿರುವ ಬದಲಾವಣೆಗಳನ್ನು ಸೂಕ್ಷ್ಮವಾಗಿ ಗಮನಿಸಿ ಅವುಗಳನ್ನು ಪಠ್ಯಕ್ರಮದಲ್ಲಿ ಅಳವಡಿಸಿಕೊಳ್ಳಬೇಕು. ಅದ–ರಿಂದ ಉದ್ಯೋಗ ಮತ್ತು ವೃತ್ತಿಪರವಾದ ಪರೀಕ್ಷೆ ಮತ್ತು ಸಂದರ್ಶನಗಳಲ್ಲಿ ಯಶಸ್ವಿ ಹೊಂದಲು ಶಿಕ್ಷಣದ ಜೊತೆಗೆ ಕೌಶಲ್ಯಗಳು ಬೇಕು. ಕಾಲಕಾಲಕ್ಕೆ ಪ್ರಸ್ತುತವೆನಿಸುವ ಸ್ಕಿಲ್‌ಗಳನ್ನು ಅಪಗ್ರೇಡ್ ಮಾಡಿಕೊಳ್ಳುವುದು ಅನಿವಾರ್ಯ ಎಂಬುದನ್ನು ಅರಿಯಬೇಕು. ಇಂದಿನ ಆಧುನಿಕ ಶಿಕ್ಷಣ ವ್ಯವಸ್ಥೆಯಲ್ಲಿ ಶಿಕ್ಷಣದ ಗುರಿ ಮತ್ತು ದೃಷ್ಟಿಕೋನ ಬದಲಾಗಬೇಕು.

**2026 ನೇಯ ವರ್ಷದ ಘೋಷವಾಕ್ಯ**

"ಹಂಚಿದ ಭವಿಷ್ಯಕ್ಕಾಗಿ ಕೌಶಲ್ಯಗಳು" ಎಂಬ ಧ್ಯೇಯವಾಕ್ಯದೊಂದಿಗೆ ಯುವಜನತೆಯನ್ನು ಕೌಶಲ್ಯದೊಂದಿಗೆ ಉದ್ಯೋಗ ಪಡೆದು ಸುಸ್ಥಿರ ಅಭಿವೃದ್ಧಿ ಮತ್ತು ಯಶಸ್ವಿ ಉದ್ಯಮಶೀಲತೆಗೆ ಸಜ್ಜುಗೊಳಿಸುವ ಮಹೋನ್ನತವಾದ ಉದ್ದೇಶವನ್ನು ಈ ವರ್ಷದ ವಿಶ್ವ ಯುವ ಕೌಶಲ್ಯ ದಿನವನ್ನು ಆಚ–'ರಿಸಲಾಗುತ್ತಿದೆ. ಭವಿಷ್ಯದ ಸವಾಲುಗಳನ್ನು ಎದು–ರಿಸಲು ಮತ್ತು ಜಾಗತಿಕವಾಗಿ ಯುವಜನರನ್ನು ಸಬಲೀಕರಣಗೊಳಿಸುವಲ್ಲಿ ಈ ಕೌಶಲ್ಯ ದಿನವು ಸಂದೇಶವನ್ನು ಸಾರುತ್ತದೆ.

**ಕೊನೆಯ ನುಡಿ**

ಕೇವಲ ಪಠ್ಯಕ್ರಮವನ್ನು ವಿವರಿಸುವ, ತಿಳಿಸುವ, ಮಾಹಿತಿ ನೀಡುವ ಕೊನೆಗೆ ಗರಿಷ್ಠ ಅಂಕದೊಂದಿಗೆ ಪದವಿ ಪಡೆದು ಉದ್ಯೋಗಕ್ಕಾಗಿ ಬೇರೊಬ್ಬರ ಮುಂದೆ ಕೈಚಾಚಿ ಅಂಗಲಾಚಿ ನಿಲ್ಲುವಂತಹ ಪರಿಸ್ಥಿತಿಯನ್ನು ತರುವಂತಾಗಬಾರದು. ಯುವಕರು 'ಸರಕಾರಿ ನೌಕರಿ' ಎಂಬ ಮರಳುಗಾಡಿನ ಮರೀಚಿಕೆಗಾಗಿ ಕಾಯ್ದು ಕುಳಿತುಕೊಳ್ಳದೇ ಜೀವನ ನಿರ್ವಹಣೆಗಾಗಿ ಯಾವುದಾದರೂ ಸ್ವಯಂ ಉದ್ಯೋಗ ಕೈಗೊಳ್ಳುವಂತೆ ರೂಪಿಸಬೇಕು. ತಾವು ಪಡೆದ ಕೌಶಲ್ಯದಿಂದ ದೇಶೀಯ ಕುಲ–ಕಸುಬುಗಳಾದ ಸಣ್ಣ, ಗುಡಿ, ಗೃಹ ಮತ್ತು ಮಧ್ಯಮ ಕೈಗಾರಿಕೆಗಳನ್ನು ಪ್ರಾರಂಭಿಸುತ್ತಾ ಸ್ವಾವಲಂಬಿಗಳಾಗಿ ಬದುಕಿ ರಾಷ್ಟ್ರದ ಆರ್ಥಿಕತೆಯನ್ನು ಬಲಪಡಿಸುವಂತಾಗಬೇಕು ಎನ್ನುವುದು ನನ್ನ ಅಂಬೋಣ.

**ಲೇಖನ**
**– ಮಲ್ಲಪ್ಪ ಸಿ. ಖೊದ್ನಾಪೂರ**
**(ತಿಕೋಟಾ)**
**ವಿಜಯಪುರ**





# ಕುಟುಂಬ ಯೋಜನೆ ಪ್ರತಿಯೊಬ್ಬರ ಹಕ್ಕು & ಜವಾಬ್ದಾರಿ :ಡಾ.ಮಾಗಿ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸರ್ಕಾರಿ ಆಸ್ಪತ್ರೆಗಳಲ್ಲಿ ಕುಟುಂಬ ಕಲ್ಯಾಣ ಸೇವೆಗಳು ಸಂಪೂರ್ಣ ಉಚಿತವಾಗಿ ಲಭ್ಯವಿವೆ. ಬಾಲ್ಯ ವಿವಾಹವನ್ನು ತಡೆದು ಸೂಕ್ತ ವಯಸ್ಸಿನಲ್ಲಿ ವಿವಾಹವಾಗಬೇಕು. ಕುಟುಂಬ ಯೋಜನೆ ಪ್ರತಿಯೊಬ್ಬರ ಹಕ್ಕು ಹಾಗೂ ಜವಾಬ್ದಾ-ರಿಯಾಗಿದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಎ.ಎ.ಮಾಗಿ ಹೇಳಿದರು.

ಸಿಂದಗಿ ನಗರದ ಜಿ.ಪಿ.ಪೋರವಾಲ್ ಕಾಲೇಜಿನಲ್ಲಿ ವಿಜಯಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ತಾಲೂಕು ಆರೋಗ್ಯ ಇಲಾಖೆ, ಜಿ.ಪಿ.ಪೋರವಾಲ ಮಹಾವಿದ್ಯಾಲಯ, ಎನ್‌ಸಿಸಿ ಹಾಗೂ ಎನ್‌ಎಸ್‌ಎಸ್ ಘಟಕಗಳ ಸಹಯೋಗದಲ್ಲಿ ಹಮ್ಮಿಕೊಂಡ ವಿಶ್ವ ಜನಸಂಖ್ಯಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜನಸಂಖ್ಯೆ ಹೆಚ್ಚಳದಿಂದ ಸಾಮಾಜಿಕ ಹಾಗೂ ಆರ್ಥಿಕ ಅಸಮಾನತೆ ಹೆಚ್ಚುವ ಸಾಧ್ಯತೆ ಇದೆ. ಸುಸ್ಥಿರ ಅಭಿವೃದ್ಧಿಗೆ ಜನಸಂಖ್ಯೆ ನಿಯಂತ್ರಣ ಅಗತ್ಯವಾಗಿದ್ದು, ಆರೋಗ್ಯ ಹಾಗೂ ಶಿಕ್ಷಣ ಸೇವೆಗಳ ಮೇಲಿನ ಒತ್ತಡವೂ ಹೆಚ್ಚುತ್ತದೆ ಎಂದರು.

ಈ ವೇಳೆ ತಾಲೂಕು ಆಯುಷ್ ವೈದ್ಯಾಧಿಕಾರಿ ಡಾ.ಮಹಾಂತೇಶ ಹಿರೇಮಠ ಮಾತನಾಡಿ, ಜನಸಂಖ್ಯೆ ಸ್ಫೋಟದಿಂದ ನಿರುದ್ಯೋಗ, ವಸತಿ ಕೊರತೆ, ಮೂಲಸೌಕರ್ಯಗಳ ಮೇಲಿನ ಒತ್ತಡ ಸೇರಿದಂತೆ ಅನೇಕ ಸಮಸ್ಯೆಗಳು ಉಂಟಾಗುತ್ತವೆ. ಉತ್ತಮ ಜೀವನಶೈಲಿಗಾಗಿ ಕುಟುಂಬ ಯೋಜನೆ ಹಾಗೂ ಶಿಸ್ತುಬದ್ಧ ಜೀವನ ಅಗತ್ಯವಾಗಿದ್ದು, "ನಾವಿಬ್ಬರು ನಮಗಿಬ್ಬರು" ಎಂಬ ಯೋಜನೆಯನ್ನು ಅಳವಡಿಸಿಕೊಂಡರೆ ಕುಟುಂಬದ ಆರೋಗ್ಯ ಮತ್ತು ಅಭಿವೃದ್ಧಿಗೆ ಸಹಕಾರಿಯಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಸಾರಂಗಮಠದ ಉತ್ತರಾಧಿಕಾರಿ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು ಆಶೀರ್ವಚನ ನೀಡಿದರು. ಸಿಂದಗಿ ಸ್ತ್ರೀರೋಗ ತಜ್ಞೆ ಡಾ.ನೂರಾನಿ ಪಟೇಲ್, ಪ್ರಾಚಾರ್ಯ ಡಾ.ಬಿ.ಎಂ. ಸರಶೆಟ್ಟಿ ಮಾತನಾಡಿದರು. ತಾಲೂಕು ಹಿರಿಯ ನಿರೀಕ್ಷಣಾಧಿಕಾರಿ ಪಿ.ವೈ.ಚೌಡಕಿ ಆರೋಗ್ಯ ಸೇವೆಗಳ ಕುರಿತು ಮಾಹಿತಿ ನೀಡಿದರು. ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಶ್ರೀಹರಿ ಕುಲಕರ್ಣಿ ಪ್ರಾಸ್ತಾವಿಕ ಮಾತನಾಡಿದರು. ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ವಿರೇಂದ್ರ ಪವಾಡೆ, ಗೀತಾ ಸಾಸಾಬಾಳ, ಸಾಯಬಣ್ಣ ಗಂಜಲಿ, ಪ್ರಾಧ್ಯಾಪಕರಾದ ಡಾ.ರವಿ ಗೋಲಾ, ವಿ.ಆರ್.ಪಾಟೀಲ, ಪ್ರಕಾಶ ರಾಠೋಡ, ಡಾ.ಸುಮಾ ನಿರಾಣಿ ಸೇರಿದಂತೆ ಬೋಧಕ-ಬೋಧಕೇತರ ಸಿಬ್ಬಂದಿಗಳು, ಎನ್‌ಸಿಸಿ ಮತ್ತು ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಇದ್ದರು. ಡಾ.ರವಿ ಲಮಾಣಿ ಸ್ವಾಗತಿಸಿದರು. ಬಸವರಾಜ ಮಹಾಜನಶೆಟ್ಟಿ, ಭೀಮಾಶಂಕರ ಅರಳಗುಂಡಗಿ ಕಾರ್ಯಕ್ರಮ ನಿರ್ವಹಿಸಿದರು.

# ಜಿಲ್ಲಾ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ಹ.ಮ.ಪೂಜಾರರಿಗೆ ಸನ್ಮಾನ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಕನ್ನಡ ಸಾಹಿತ್ಯ ಸಮ್ಮೇಳನಗಳು ಭಾಷೆ, ಸಾಹಿತ್ಯ, ಸಂಸ್ಕೃತಿ ಹಾಗೂ ಜನಪದ ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವ ಮಹತ್ವದ ವೇದಿಕೆಗಳಾಗಿವೆ. ಇಂತಹ ಸಮ್ಮೇಳನಗಳು ಹೊಸ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವುದರ ಜೊತೆಗೆ ಹಿರಿಯ-ಕಿರಿಯ ಸಾಹಿತಿಗಳ ನಡುವೆ ಸಾಹಿತ್ಯಿಕ ಸಂವಾದಕ್ಕೆ ಅವಕಾಶ ಕಲ್ಪಿಸುತ್ತವೆ ಎಂದು ಸರ್ವಾಧ್ಯಕ್ಷರಾಗಿ ಆಯ್ಕೆಯಾದ ಹ.ಮ.ಪೂಜಾರ ಹೇಳಿದರು.

ಸಿಂದಗಿ ನಗರದಲ್ಲಿ ನಡೆಯುವ 21ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾದ ನಿಮಿತ್ತ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಮಕ್ಕಳಲ್ಲಿ ಓದುವ ಹವ್ಯಾಸ, ಸೃಜನಶೀಲತೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಸಾಹಿತ್ಯದ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಕನ್ನಡ ಭಾಷೆಯ ಉಳಿವು, ಬೆಳವಣಿಗೆ ಹಾಗೂ ಸಾಹಿತ್ಯದ ಶ್ರೀಮಂತಿ-ಕೆಯನ್ನು ಕಾಪಾಡುವುದು ಪ್ರತಿಯೊಬ್ಬ ಕನ್ನಡಿಗನ ಹೊಣೆಗಾರಿಕೆಯಾಗಿದೆ. ನನ್ನನ್ನು 21ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ ಜಿಲ್ಲಾ ಹಾಗೂ ತಾಲೂಕಿನ ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು, ಸ್ಥಳೀಯ ಶಾಸಕರಿಗೂ, ಸಾಹಿತ್ಯಾಭಿಮಾನಿಗಳು ಹಾಗೂ ಜಿಲ್ಲೆಯ ಸಮಸ್ತ ಕನ್ನಡ ಮನಸ್ಸುಗಳಿಗೆ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದರು.

ಸಮ್ಮೇಳನವನ್ನು ಅರ್ಥಪೂರ್ಣ, ವೈಚಾರಿಕ ಹಾಗೂ ಸಾಹಿತ್ಯಿಕವಾಗಿ ಯಶಸ್ವಿಗೊಳಿಸಲು ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಕರೆ ನೀಡಿದರು.


ಈ ವೇಳೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಹಾಸಿಂಪೀರ ವಾಲಿಕಾರ ಮಾತನಾಡಿ, ಹ.ಮ. ಪೂಜಾರ ಅವರು ಮಕ್ಕಳ ಸಾಹಿತ್ಯ ಕ್ಷೇತ್ರಕ್ಕೆ ನೀಡಿರುವ ಕೊಡುಗೆ ಅಪಾರವಾಗಿದೆ. ಅವರ ಅನುಭವ, ಸಾಹಿತ್ಯಿಕ ಸಾಧನೆ ಹಾಗೂ ಸಮಾಜಮುಖಿ ಚಿಂತನೆಗಳು ಜಿಲ್ಲಾ ಸಾಹಿತ್ಯ ಸಮ್ಮೇಳನಕ್ಕೆ ಹೊಸ ಮೆರುಗು ತಂದುಕೊಡಲಿದ್ದು, ಜಿಲ್ಲೆಯ ಸಾಹಿತ್ಯಾಸಕ್ತರಿಗೆ ಉತ್ತಮ ಮಾರ್ಗದರ್ಶನ ದೊರೆಯಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಾಯ್.ಸಿ.ಮಯೂರ ಮಾತನಾಡಿ, ಹ.ಮ.ಪೂಜಾರ ಅವರ ಆಯ್ಕೆ ಜಿಲ್ಲೆಯ ಸಾಹಿತ್ಯ ವಲಯಕ್ಕೆ ಹೆಮ್ಮೆಯ ಸಂಗತಿಯಾಗಿದೆ. ಸಾಹಿತ್ಯಾಭಿಮಾನಿಗಳು, ವಿದ್ಯಾರ್ಥಿಗಳು ಹಾಗೂ ಕನ್ನಡಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜಿಲ್ಲಾ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸನ್ಮಾನ ಸಮಾರಂಭದಲ್ಲಿ ಕಸಾಪ ಗೌರವಾಧ್ಯಕ್ಷ ಮಹಾಂತೇಶ ಪಟ್ಟಣಶೆಟ್ಟಿ, ಗೌರವ ಕಾರ್ಯದರ್ಶಿ ಆನಂದ ಶಾಬಾದಿ, ಮಹಾಂತೇಶ ನೂಲಾನವರ, ಎಸ್.ಎಸ್.ಸಾತಿಹಾಳ, ಎ.ಆರ್.ಹೆಗ್ಗನದೊಡ್ಡಿ, ಶಿವಕುಮಾರ ಶಿವಸಿಂಪಿಗೇರ, ಮಾಜಿ ಅಧ್ಯಕ್ಷ ಶಿವಾನಂದ ಬಡಾನೂರ, ರಾಜಶೇಖರ ಪೂಜಾರಿ, ಸೈನಾಬಿ ಮಸಳಿ, ವರ್ಷಾ ಪಾಟೀಲ, ಅನಸೂಬಾಯಿ ಪರಗೊಂಡ, ಶಾಂತು ರಾಣಾಗೋಳ, ಜೈಭೀಮ ತಳಕೇರಿ, ಗುಂಡು ಬಾಣಿ, ಜಮೀರ ಮೋಮಿನ, ರಮೇಶ ಪೂಜಾರ, ಜ್ಯೋತಿ ಪೂಜಾರ, ಅಶ್ವಿನಿ ಲೋಣಿ, ಮಂಗಲಾ ಬಮ್ಮಣ್ಣಿ, ಸಾಧನಾ ಇಮಡೆ, ಹೇಮಾ ಬಡಿಗೇರ ಸೇರಿದಂತೆ ಪರಿಷತ್ತಿನ ಪದಾಧಿಕಾರಿಗಳು, ಸಾಹಿತಿಗಳು, ಸಾಹಿತ್ಯಾಸಕ್ತರು ಇದ್ದರು.

# ದೂರಾದ ದಂಪತಿಗಳನ್ನು ಬೆಸೆದ ಲೋಕ್ ಅದಾಲತ್

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಕಳೆದ ನಾಲ್ಕು ವರ್ಷಗಳಿಂದ ಕುಟುಂಬ ಕಲಹದಿಂದ ಪ್ರತ್ಯೇಕವಾಗಿ ಜೀವನ ಸಾಗಿಸುತ್ತಿದ್ದ ಎರಡು ಕುಟುಂಬಗಳನ್ನು ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ನ್ಯಾಯಾಧೀಶರ, ಉಭಯ ಪಕ್ಷಗಳ ನ್ಯಾಯವಾದಿಗಳ ಮತ್ತು ಸಮನ್ಸ್ ಮುಟ್ಟಿಸುವ ಪೊಲೀಸ್ ಪೇದೆಯ ಮನವೊಲಿಕೆ ಮತ್ತು ರಾಜಿ ಸಂಧಾನದ ಫಲವಾಗಿ ಮತ್ತೆ ಒಂದಾದ ಮನಕಲಕುವ ಘಟನೆ ಇಲ್ಲಿನ ನ್ಯಾಯಾಲಯದಲ್ಲಿ ನಡೆದಿದೆ.

ದಂಪತಿಗಳ ನಡುವೆ ಉಂಟಾಗಿದ್ದ ಭಿನ್ನಾಭಿಪ್ರಾಯದಿಂದ ಪ್ರಕರಣ ನ್ಯಾಯಾಲಯದ ಮೆಟ್ಟಿಲೇರಿದ್ದವು. ಹಲವು ವರ್ಷಗಳಿಂದ ವಿಚಾರಣೆ ನಡೆಯುತ್ತಿದ್ದವು. ಒಂದು ಕುಟುಂಬದ ದಂಪತಿಗೆ ಮೂರು ಮಕ್ಕಳಿದ್ದು, ತಂದೆ-ತಾಯಿ ದೂರಾಗಿದ್ದರಿಂದ ಮಕ್ಕಳು ತೀವ್ರ ಮಾನಸಿಕ ನೋವು ಅನುಭವಿಸುತ್ತಿದ್ದರು.

ಇನ್ನೊಂದು ಪ್ರಕರಣದಲ್ಲಿ ಅಂಗವಿಕಲ ಮಹಿಳೆಗೆ ಜೀವನ ಸಂಗಾತಿಯಾಗಿ ಬಾಳು ನೀಡಿದ್ದ ಪತಿ, ಕುಟುಂಬ ಕಲಹದಿಂದ ದೂರಾಗಿದ್ದರು. ಈ ವೇಳೆ ಉಭಯ ಪಕ್ಷಗಳೊಂದಿಗೆ ಸಮಾಲೋಚನೆ ನಡೆಸಿದ ಸಿವಿಲ್ ನ್ಯಾಯಾಧೀಶರಾದ ರಾಮಮೂರ್ತಿ ಎನ್ ಅವರು, ಅಂಗವಿಕಲ ಮಹಿಳೆಯ ಕೈಹಿಡಿದು ಬದುಕು ಕಟ್ಟಿಕೊಟ್ಟಿರುವುದು ನಿಮ್ಮ ದೊಡ್ಡ ಮನಸ್ಸಿನ ಪ್ರತೀಕ. ಆ ಮಹತ್ವವನ್ನು ಜೀವನದ ಕೊನೆಯವರೆಗೂ ಉಳಿಸಿಕೊಂಡಾಗಲೇ ಆ ತ್ಯಾಗಕ್ಕೂ, ಈ ದಾಂಪತ್ಯಕ್ಕೂ ನಿಜವಾದ ಅರ್ಥ ಸಿಗುತ್ತದೆ. ಕ್ಷಣಿಕ ಕೋಪಕ್ಕಾಗಿ ಅಮೂಲ್ಯವಾದ ಬಾಂಧವ್ಯವನ್ನು ಕಳೆದುಕೊಳ್ಳಬೇಡಿ ಎಂದು ಪತಿಗೆ ಮನಮುಟ್ಟುವ ಕಿವಿಮಾತು ಹೇಳಿದರು.

ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಪ್ರಕರಣಗಳನ್ನು ರಾಜಿ ಸಂಧಾನಕ್ಕೆ ಕೈಗೆತ್ತಿಕೊಂಡ ಹಿರಿಯ ಸಿವಿಲ್ ನ್ಯಾಯಾಧೀಶರಾದ ರವೀಂದ್ರಕುಮಾರ ಕಟ್ಟಿಮನಿ ಮತ್ತು ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳೂ ಹಾಗೂ ಸಿವಿಲ್ ನ್ಯಾಯಾಧೀಶರಾದ ರಾಮಮೂರ್ತಿ ಎನ್ ಇವರುಗಳು ಉಭಯ ಪಕ್ಷಗಳೊಂದಿಗೆ ಪ್ರತ್ಯೇಕವಾಗಿ ಹಾಗೂ ಜಂಟಿಯಾಗಿ ಸುದೀರ್ಘ ಸಮಾಲೋಚನೆ ನಡೆಸಿದರು. ಜೀವನದ ಮಹತ್ವ, ಮಕ್ಕಳ ಭವಿಷ್ಯ ಹಾಗೂ ಕುಟುಂಬದ ಜವಾಬ್ದಾ-ರಿಯನ್ನು ಮನವರಿಕೆ ಮಾಡಿಕೊಟ್ಟ ಪರಿಣಾಮ, ಎರಡೂ ಕುಟುಂಬಗಳು ತಮ್ಮ ಹಳೆಯ ಭಿನ್ನಾಭಿಪ್ರಾಯಗಳನ್ನು ಮರೆತು ಮತ್ತೆ ಒಂದಾಗಿ ಜೀವನ ಸಾಗಿಸಲು ಒಪ್ಪಿಗೆ ಸೂಚಿಸಿದರು.

ನ್ಯಾಯಾಲಯದಲ್ಲೇ ಪರಸ್ಪರ ಹಾರ ಬದಲಾಯಿಸಿಕೊಂಡು ಸಿಹಿ ಹಂಚಿದ ದಂಪತಿಗಳು, ಕುಟುಂಬದೊಂದಿಗೆ ಹೊಸ ಜೀವನ ಆರಂಭಿಸಲು ಸಮ್ಮತಿಸಿದ ದೃಶ್ಯ ಅಲ್ಲಿದ್ದವರ ಮನಸ್ಸನ್ನು ತಟ್ಟಿತು. ವಿಶೇಷವಾಗಿ ತಮ್ಮ ಪೋಷಕರು ಮತ್ತೆ ಒಂದಾಗಿರುವುದನ್ನು ಕಂಡ ಮಕ್ಕಳ ಸಂತಸ ಅಲ್ಲಿದ್ದವರ ಗಮನ ಸೆಳೆಯಿತು.

ಈ ವೇಳೆ ಉಭಯ ನ್ಯಾಯಾಧೀಶರು ಮಾತನಾಡಿ, ವಿಚ್ಛೇದನವೇ ಪ್ರತಿಯೊಂದು ಸಮಸ್ಯೆಗೆ ಪರಿಹಾರವಲ್ಲ. ಪರಸ್ಪರ ವಿಶ್ವಾಸ, ತಾಳ್ಮೆ ಮತ್ತು ಸಂವಹನದಿಂದ ಅನೇಕ ಕುಟುಂಬಗಳನ್ನು ಉಳಿಸಬಹುದು. ಮಕ್ಕಳ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ದಂಪತಿಗಳು ಸಾಮರಸ್ಯದಿಂದ ಬದುಕಬೇಕು. ಲೋಕ್ ಅದಾಲತ್‌ನ ಉದ್ದೇಶ ಕೇವಲ ಪ್ರಕರಣ ಮುಕ್ತಾಯಗೊಳಿಸುವುದಲ್ಲ, ಸಾಧ್ಯವಾದಲ್ಲಿ ಒಡೆದ ಕುಟುಂಬಗಳನ್ನು ಮತ್ತೆ ಬೆಸೆಯುವುದಾಗಿದೆ ಎಂದು ಹೇಳಿದರು.

ಈ ವೇಳೆ ಪಕ್ಷಗಾರರ ಪರ ವಕೀಲರಾದ ಎನ್.ಜಿ.ಕುಲಕರ್ಣಿ, ಐ.ಎಸ್.ಹಗಟಗಿ ನ್ಯಾಯವಾದಿಗಳಾದ ಎಚ್.ಟಿ.ಪೂಜಾರಿ, ವಿ.ಸಿ.ಉರಾನ್, ಚೇತನ ಶಿವಶಿಂಪಿ, ಎಂ.ಬಿ.ಬಿರಾದಾರ, ಬಸಣ್ಣ ಮುಂದಿನಮನಿ, ರವಿ ನಾಲತವಾಡ, ಸಿ.ಎಸ್.ಕಾಖಂಡಕಿ, ಸೇವಾ ಸಮಿತಿಯ ಆಡಳಿತ ಸಹಾಯಕ ಅರವಿಂದ ಕುಂಬಾರ, ನ್ಯಾಯಾಲಯದ ಸಿಬ್ಬಂದಿಗಳಾದ ರಾಮಣ್ಣ ಕಮ್ಮಾರ, ನಿಸಾರ ನೇಗಿನಾಳ ಸೇರಿದಂತೆ ದಂಪತಿಗಳ ಸಂಬಂಧಿಗಳು ಇದ್ದರು.



## ಬೆಂಗಳೂರಿನಲ್ಲಿ ಡಿಜಿಪಿ ಭೇಟಿ ಮಾಡಿದ ಕೆಯುಡಬ್ಲ್ಯೂಜೆ ನಿಯೋಗ । ಆರ್‌ಟಿಐ ಪತ್ರಕರ್ತರ ಮೇಲೆ ನಿಗಾಕ್ಕೆ ಮನವಿ

# ನಕಲಿ ಪತ್ರಕರ್ತರ ಮೇಲೆ ಕ್ರಮಕ್ಕೆ ಕೆಯುಡಬ್ಲ್ಯೂಜೆ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ನೈಜ ಪತ್ರಕರ್ತರ ಮೇಲೆ ವಿನಾ ಕಾರಣ ತೇಜೋವಧೆ ಮಾಡುವ ನಕಲಿ ಮತ್ತು ಆರ್‌ಟಿಐ ಪತ್ರಕರ್ತರ ಮೇಲೆ ಕಟ್ಟು ನಿಟ್ಟಿನ ಕ್ರಮ ತೆಗೆದುಕೊಳ್ಳಬೇಕು ಎಂದು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಪೊಲೀಸ್ ಮಹಾ ನಿರ್ದೇಶಕರನ್ನು ಒತ್ತಾಯಿಸಿದೆ.

ಬೆಂಗಳೂರಿನಲ್ಲಿ ಪೊಲೀಸ್ ಮಹಾ ನಿರ್ದೇಶಕ ಡಾ.ಎಂ.ಎ.ಸಲೀಂ ಅವರನ್ನು ಭೇಟಿ ಮಾಡಿದ್ದ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದ ಪದಾಧಿಕಾರಿಗಳ ನಿಯೋಗ ಈ ಬಗ್ಗೆ ಮನವಿ ಸಲ್ಲಿಸಿತು. ಪತ್ರಿಕೆಗಳನ್ನೆ ತರದವರು, ಸುದ್ದಿಯನ್ನು ಬರೆಯಲು ಬಾರದವರು ಮತ್ತು ಸುದ್ದಿ ಮನೆಗೆ ಯಾವ ರೀತಿಯ ಸಂಬಂಧವೂ ಇಲ್ಲದವರು ತಾವೇ ಪತ್ರಕರ್ತರು ಎಂದು ಬಿಂಬಿಸಿಕೊಳ್ಳುವ ವಿಸಿಟಿಂಗ್ ಕಾರ್ಡ್ ಪತ್ರಕರ್ತರು, ನೆಪ ಮಾತ್ರಕ್ಕೆ ಸಂಘಟನೆ ಮಾಡಿಕೊಂಡು, ಬ್ಲಾಕ್ ಮೇಲ್ ಮಾಡುವ ಆರ್‌ಟಿಐ ಪತ್ರಕರ್ತರ ವಸೂಲಿ ದಂಧೆಯೂ ಹೆಚ್ಚುತ್ತಿರುವುದು ಕಳವಳಕಾರಿ ಸಂಗತಿ. ಈ ಬೆಳವಣಿಗೆಗೆ ಕಡಿವಾಣ ಹಾಕಲು ಪೊಲೀಸ್ ಇಲಾಖೆ ಮುಂದಾಗಬೇಕು ಎಂದು ವಿನಂತಿಸಿದರು.

ಪತ್ರಿಕಾ ಸಂಘಟನೆಯ ಹೆಸರು ಹೇಳಿಕೊಳ್ಳುವ ಕೆಲ ನಕಲಿ ಪತ್ರಕರ್ತರು ಆಗಿಂದಾಗ್ಗೆ ಪೊಲೀಸ್ ಠಾಣೆಗೆ ದೂರು ಕೊಡುವುದು, ಆರ್‌ಟಿಐ ಹಾಕುವುದನ್ನೆ ತಮ್ಮ ಕಾಯಕವಾಗಿಸಿಕೊಂಡಿದ್ದಾರೆ. ಇಂಥವರನ್ನು ಪೊಲೀಸ್ ಠಾಣೆಯಲ್ಲೂ ಬ್ಲಾಕ್ ಲಿಸ್ಟ್‌ನಲ್ಲಿ ಸೇರಿಸಿ ಕ್ರಮ ಜರುಗಿಸಬೇಕು ಎಂದು ಪೊಲೀಸ್ ಮಾಹಾನಿರ್ದೇಶಕರಿಗೆ ಮನದಟ್ಟು ಮಾಡಿಕೊಡಲಾಯಿತು. ಮನವಿಯನ್ನು ಗಂಭೀರವಾಗಿ ಪರಿಗಣಿಸಿ ಕ್ರಮ ಜರುಗಿಸುವುದಾಗಿ ಪೊಲೀಸ್ ಮಾಹಾನಿರ್ದೇಶಕರು, ಕೆಯುಡಬ್ಲ್ಯೂಣಟಿಜಜ-ಜಿಟಿಜಜಜೆ ನಿಯೋಗಕ್ಕೆ ಭರವಸೆ ನೀಡಿದರು.

ನಿಯೋಗದಲ್ಲಿ ಕೆಯುಡಬ್ಲ್ಯೂಜೆ ಉಪಾಧ್ಯಕ್ಷರಾದ ಅಜ್ಜಮಾಡ ರಮೇಶ್ ಕುಟ್ಟಪ್ಪ, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಕಾರ್ಯದರ್ಶಿಗಳಾದ ಸೋಮಶೇಖರ ಕೆರಗೋಡು, ನಿಂಗಪ್ಪ ಚಾವಡಿ, ಖಜಾಂಚಿ ವಾಸುದೇವ ಹೊಳ್ಳ ಅವರು ಉಪಸ್ಥಿತ-ರಿದ್ದರು

# ವಿಶ್ವ ಜನಸಂಖ್ಯಾ-ಡೆಂಗೀ ಮಾಸಾಚರಣೆ ಕಾರ್ಯಕ್ರಮ

■ ಉದಯರಶ್ಮಿ ದಿನಪತ್ರಿಕೆ



ತಾಳಿಕೋಟೆ: ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ ವಿಜಯಪುರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಜಯಪುರ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಕ್ರಮದಡಿ ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಮುದ್ದೇಬಿಹಾಳ ಹಾಗೂ ತಾಳಿಕೋಟೆ ಇವರ ಸಂಯುಕ್ತ ಆಶ್ರಯದಲ್ಲಿ ವಿಶ್ವ ಜನಸಂಖ್ಯಾ ದಿನಾಚರಣೆ ಹಾಗೂ ರಾಷ್ಟ್ರೀಯ ಡೇಂಗೀ ಮಾಸಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀಮತಿ ಅನಸುಯಾ ತೇರದಾಳ ಮಾತನಾಡಿ, ಜನಸಂಖ್ಯಾ ದಿನಾಚರಣೆ ಉದ್ದೇಶ ಹಾಗೂ ಘೋಷವಾಕ್ಯ ಆರೋಗ್ಯಕರ ಸಮಯದಲ್ಲಿ ಗರ್ಭಧಾರಣೆ ಹಾಗೂ ಮಕ್ಕಳ ನಡುವಿನ ಆರೋಗ್ಯಕರ ಅಂತರ ಕಾಪಾಡುವುದರ ತಾಯಿ ಮತ್ತು ಮಕ್ಕಳ ಆರೋಗ್ಯ ವೃದ್ದಿಸುವದೊಂದಿಗೆ ಅನಗತ್ಯ ಗರ್ಭದಾರಣೆ ತಡೆಗಟ್ಟಬಹುದು ಎಂಬುದರ ಕುರಿತು ಪ್ರತಿ ವರ್ಷ ಜುಲೈ 11 ರಂದು ವಿಶ್ವ ಜನಸಂಖ್ಯೆ ದಿನಾಚರಣೆ ಯನ್ನು ಆಚ-'ರಿಸಲಾಗುವುದು ಎಂದು ತಿಳಿಸಿದ ಅವರು ಜನಸಂಖ್ಯೆ ಬೆಳವಣಿಗೆಯಿಂದ ಆಗುವ ದುಷ್ಪರಿಣಾಮ ಹಾಗೂ ಜನಸಂಖ್ಯೆ ದಿನಾಚರಣೆ ಉದ್ದೇಶಗಳ ಕುರಿತು ಹಾಗೂ ಕುಟುಂಬ ಕಲ್ಯಾಣ ಯೋಜನೆಯ ಶಾಶ್ವತ ಮತ್ತು ತಾತ್ಕಾಲಿಕ ವಿಧಾನಗಳ ಬಳಕೆ ಬಗ್ಗೆ ತಿಳಿಸಿದರು. ಜನನಗಳ ನಡುವೆ ಅಂತರ ಬಾಲ್ಯ ವಿವಾಹ ಮದುವೆಯ ವಯಸ್ಸು ಹೆಣ್ಣಿಗೆ 18 ವರ್ಷ, ಗಂಡಿಗೆ 21 ವರ್ಷ ಆಗಿರಬೇಕೆಂದು ತಿಳಿಸಿದರು.ಹಿರಿಯ ಆರೋಗ್ಯ ನೀರಿಕ್ಷಣಾಧಿಕಾರಿ ಬಿ.ಎಸ್.ಶಿವಯೋಗಿಮಠ ಮಾತನಾಡಿ ಡೆಂಗೀ ನಿಯಂತ್ರಣ ನಮ್ಮೆಲ್ಲರ ಹೊಣೆ ಡೆಂಗೀ ಹರಡುವ ಬಗ್ಗೆ ಮುನ್ನೆಚ್ಚರಿಕೆ ವಹಿಸುವದರ ಬಗ್ಗೆ ತಿಳಿ ಹೇಳಿದರು.

ಈ ಕಾರ್ಯಕ್ರಮದಲ್ಲಿ ಶ್ರೀಮತಿ ನೂರಜಾನ ಬೋರಗಿ, ಶ್ರೀಮತಿ ಬಿಸ್ಮಿಲ್ಲಾ ಬಿದಕೋಟಿ, ಶ್ರೀಮತಿ ಮಹಾದೇವಿ ಟಕ್ಕಳಕಿ, ಅಬ್ದುಲರಜಾಕ ಕೊಡೇಕಲ್, ಕಾಂಚನಾ ಪಾಟೀಲ, ಹಾಗೂ ಆಶಾ ಕಾರ್ಯಕರ್ತೆಯರಾದ ಶ್ರೀಮತಿ ಇಂದಿರಾಬಾಯಿ ಕದಂ, ವಿಜಯಲಕ್ಷ್ಮಿ ಲಾಹೋರಕರ, ವಿದ್ಯಾವತಿ ಬೂದಿಹಾಳ, ಜಯಶ್ರೀ ಹಿರೇಮಠ, ಪವಿತ್ರಾ ಹಜೇರಿ, ಪದ್ಮಾ ನಾಡಕರ್ಣಿ, ವಿಶಾಲತಾ ಕೊಡೇಕಲ್ಲ, ಸೌಂದರ್ಯ ನಾಡಕರ್ಣಿ, ಜಯಬೂನಬಿ ಮಕಾಂದಾರ, ಮೊದಲಾದವರು ಉಪಸ್ಥಿತರಿದ್ದರು. ಶ್ರೀಮತಿ ಅನ್ನಪೂರ್ಣ ನಡುವಿನಮನಿ ಸ್ವಾಗತಿಸಿ ವಂದಿಸಿದರು.

# ರಾಜ್ಯ ಸರ್ಕಾರದಿಂದ ಎಸ್‌ಆರ್ ವಿಫಲಗೊಳಿಸುವ ಹುನ್ನಾರ :ಬಿಜೆಪಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಎಸ್.ಐ.ಆರ್. ವಿಫಲಗೊಳಿಸುವ ಹುನ್ನಾರದೊಂದಿಗೆ ರಾಜ್ಯ ಸರ್ಕಾರ ಶಾಶ್ವತ ರಹವಾಸಿ ಪ್ರಮಾಣ ಪತ್ರ ನೀಡುವ ಪ್ರಕ್ರಿಯೆ ಆರಂಭಿಸಿ ದೇಶದ ಆಂತ-ರಿಕ ಭದ್ರತೆಗೆ ದೊಡ್ಡ ಆತಂಕ ಮೂಡಿಸುತ್ತಿದ್ದು, ಕೂಡಲೇ ರಾಜ್ಯಪಾಲರು ಹಾಗೂ ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕು ಎಂದು ಒತ್ತಾಯಿಸಿ ಹಾಗೂ ಪಿ.ಆರ್.ಸಿ. ಪ್ರಕ್ರಿಯೆ ಕೈಗೊಳ್ಳುತ್ತಿರುವ ಕರ್ನಾಟಕ ಸರ್ಕಾರದ ವಿರುದ್ಧ ಭಾರತೀಯ ಜನತಾ ಪಕ್ಷದ ಮುಖಂಡರು ಬೃಹತ್ ಪ್ರತಿಭಟನೆ ನಡೆಸಿದರು.

ಡಾ.ಬಿ.ಆರ್. ಅಂಬೇಡ್ಕರ್ ವೃತ್ತದ ಎದುರು ಜಮಾಯಿಸಿದ ನೂರಾರು ಕಾರ್ಯಕರ್ತರು ಪಿ.ಆರ್.ಸಿ. ಜಾರಿ ಮಾಡುತ್ತಿರುವ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಅಸಮಾಧಾನ ಹೊರಹಾಕಿದರು. ನಂತರ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಾಪಲರು ಹಾಗೂ ಕೇಂದ್ರ ಗೃಹ ಮಂತ್ರಾಲಯಕ್ಕೆ ಲಿಖಿತ ಮನವಿ ಸಲ್ಲಿಸಲಾಯಿತು.

ನೇತೃತ್ವ ವಹಿಸಿದ್ದ ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಅಕ್ರಮ ವಲಸಿಗರನ್ನು ರಕ್ಷಣೆ ಮಾಡಿ ತನ್ನ ಮತ ಬ್ಯಾಂಕ್ ಆಗಿ ಮಾಡಿಕೊಳ್ಳಲು ಕಾಂಗ್ರೆಸ್ ಈ ಷಡ್ಯಂತ್ರ ರೂಪಿಸಿದೆ, ರಾಜ್ಯದ ಆಂತ-ರಿಕ ಭದ್ರತೆಯನ್ನೂ ಗಣನೆಗೆ ತೆಗೆದುಕೊಳ್ಳದೇ ಕುರ್ಚಿ ಆಸೆಗೆ ಇಷ್ಟೊಂದು ನೀಚ ಮಟ್ಟಕ್ಕೆ ಇಳಿದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಮಾತನಾಡಿ, ಪಿಆರ್ ಸಿ ಜಾರಿಯಿಂದ ಅಕ್ರಮ ನಿವಾಸಿಗಳಿಗೆ ಅಧಿಕೃತ ಮುದ್ರೆ ದೊರಕಿ ಕಾನೂನು ಸುವ್ಯವಸ್ಥೆಯೂ ನಿಯಂತ್ರಣದಲ್ಲಿ ಇಲ್ಲದ ಪರಿಸ್ಥಿತಿ ಬರಲಿದೆ. ಭಾರತದ ಸಂವಿಧಾನವು ದೇಶಾದ್ಯಂತ ಎಲ್ಲಾ ನಾಗರಿಕರಿಗೆ ಒಂದೇ ಪೌರತ್ವವನ್ನು ಕಲ್ಪಿಸುತ್ತದೆ. ಆದರೆ, ಕರ್ನಾಟಕ ಸರ್ಕಾರವು ಶಾಶ್ವತ ನಿವಾಸ ಪ್ರಮಾಣಪತ್ರ ವನ್ನು ನೀಡುವುದು ಈ ಸಾಂವಿಧಾನಿಕ ಚೌಕಟ್ಟಿಗೆ ವಿರುದ್ಧವಾಗಿದೆ, ಇದು ಯಾವುದೇ ಸಾಂವಿಧಾನಿಕ ಅಥವಾ ಶಾಸನಬದ್ಧ ಅಧಿಕಾರವಿಲ್ಲದೆ ಶಾಶ್ವತ ನಿವಾಸಿಗಳು ಎಂಬ ಪ್ರತ್ಯೇಕ ವರ್ಗವನ್ನು ರಚಿಸಲು ಪ್ರಯತ್ನಿಸುತ್ತದೆ. ಅಂತಹ ಉಲ್ಲಂಘಿಸುತ್ತದೆ ಎಂದರು.

ಬಿಜೆಪಿ ಮುಖಂಡ ಪ್ರಮುಖ ಚಂದ್ರಶೇಖರ ಕವಟಗಿ ಮಾತನಾಡಿ, ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶಿಯರನ್ನು ನೆಲೆಯನ್ನು ಅಧಿಕೃತಗೊಳಿಸುವ ದೊಡ್ಡ ಷಡ್ಯಂತ್ರಕ್ಕೆ ಕಾಂಗ್ರೆಸ್ ಸರ್ಕಾರ ಮುಂದಾಗಿದೆ,

ಬಾಂಗ್ಲಾದೇಶ ಮಾತ್ರವಲ್ಲದೇ ಪಶ್ಚಿಮ

■ ಸರ್ಕಾರದ ವಿರುದ್ಧ ಬಿಜೆಪಿ ಮುಖಂಡರಿಂದ ಬೃಹತ್ ಪ್ರತಿಭಟನೆ । ರಾಜ್ಯಪಾಲರು ಹಾಗೂ ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಲು ಆಗ್ರಹ

ಬಂಗಾಲದಿಂದ ಲಕ್ಷಾಂತರ ಮಂದಿ ಕರ್ನಾಟಕಕ್ಕೆ ಬಂದಿದ್ದಾರೆಂಬ ಮಾಹಿತಿ ಇದೆ. ಈ ಪ್ರಮಾಣಪತ್ರದಿಂದ ಕರ್ನಾಟದ ಪ್ರಜೆಗಳಿಗೆ ಇದ-ರಿಂದ ತೊಂದರೆ ಆಗಲಿದೆ. ನೀರು, ಆಹಾರ, ಪಡಿತರಚೀಟಿ ಸವಲತ್ತುಗಳು ಅವರಿಗೆ ಸಿಗಲಿದ್ದು, ರಾಜ್ಯದ ಪೌರರ ಸೌಲಭ್ಯಗಳು ಕಡಿಮೆ ಆಗಲಿದೆ. ಅಪರಾಧ ಪ್ರಮಾಣವೂ ಹೆಚ್ಚಾಗುವ ಭೀತಿ ತಲೆದೋರಿದೆ ಎಂದರು.

ಪಿಆರ್.ಸಿ ಗಂಭೀರ ಸಾಂವಿಧಾನಿಕ, ಕಾನೂನು ಮತ್ತು ರಾಷ್ಟ್ರೀಯ ಭದ್ರತಾ ಆತಂಕಗಳನ್ನು ಹುಟ್ಟುಹಾಕಿದೆ. ಇದರ ಕುರಿತು ಕೇಂದ್ರ ಗೃಹ ಇಲಾಖೆಯು ತಕ್ಷಣವೇ ಮಧ್ಯಪ್ರವೇಶ ಮಾಡಬೇಕು ಒತ್ತಾಯಿಸಿದರು.

ಸಂಸದ ರಮೇಶ ಜಿಗಜಿಣಗಿ, ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಬಿಜೆಪಿ ಮುಖಂಡರಾದ ವಿಜುಗೌಡ ಪಾಟೀಲ, ವಿಜಯಕುಮಾರ್ ಕೊಡಿಗನೂರ್ ಸಂಜಯ ಪಾಟೀಲ ಕನಮಡಿ, ಈರಣ್ಣ ರಾವೂರ, ಸಾಬು ಮಾಶ್ಯಾಳ, ಮಳುಗೌಡ ಪಾಟೀಲ, ಸಂದೀಪ ಪಾಟೀಲ, ಚಿದಾನಂದ ಛಲವಾದಿ, ಕಾಸುಗೌಡ ಬಿರಾದಾರ, ಸಂಜೀವ ಐಹೊಳ್ಳಿ, ಸ್ವಪ್ನಾ ಕಣಮುಚನಾಳ, ಸಂತೋಷ, ಪಾಟೀಲ್ ಡಂಬಳ ರವಿಕಾಂತ ಬಗಲಿ, ಹಣಮಂತಗೌಡ ಬಿರಾದಾರ, ಶ್ರೀ ಹರ್ಷಗೌಡ ಪಾಟೀಲ, ಎಸ್.ಎ. ಪಾಟೀಲ, ವಿಜಯ ಜೋಶಿ, ರಾಜೇಶ ತಾವಸೆ, ಕೃಷ್ಣಾ ಗುನ್ನಾಳಕರ, ಶಿವರುದ್ರ ಬಾಗಲಕೋಟ, ರಾಜಶೇಖರ್ ಮಗಿಮಠ. ರಾಹುಲ್ ಜಾಧವ, ರಾಘವೇಂದ್ರ ಕಾಪಸೆ, ಭರತ ಕೋಳಿ, ಕಾಂತು ಶಿಂಧೆ, ವಿನಾಯಕ ದಹಿಂಡೆ, ಬಾಲರಾಜ ರೆಡ್ಡಿ, ರಾಜಕುಮಾರ ಸಗಾಯಿ, ಶ್ರೀಧರ್ ಬಿಜ್ಜರಗಿ ಚಿನ್ನು ಚಿನಗುಂಡಿ, ರಾಜೇಂದ್ರ ವಾಲಿ, ಭಾರತಿ ಭೂಯ್ಯಾರ, ಈರಣ್ಣ ವಾಡೇದ, ಜಯಶ್ರೀ ಅಬ್ದುಲಪೂರ, ಸಂಗು ಉಕ್ಕಲಿ, ಆನಂದ ಮುಚ್ಚಂಡಿ, ಅನೀಲ್ ಉಪ್ಪಾರ, ಸಿದ್ದು ಬುಳ್ಳಾ, ಹರೀಶಗೌಡ ಪಾಟೀಲ, ಪರಶುರಾಮ ರಜಪೂತ, ಹುಸೇನ ಗೌಂಡಿ, ವಿವೇಕ ತಾವರಗೇರಿ, ರಾಮಚಂದ್ರ ಚವ್ಹಾಣ, ಗಣೇಶ ಉಪ್ಪಾರ, ವಿಕಾಸ ಪದಕಿ, ಶರಣು ಕುಂಬಾರ ಸಿದ್ದು ಮಲ್ಲಿಕಾರ್ಜುನ ಮಠ ಮಲ್ಲಮ್ಮ ಜೋಗುರ್ ಪಾಲ್ಗೊಂಡಿದ್ದರು.



**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR